ಸಂಪುಟ : 11 ಸಂಚಿಕೆ: 50 ಪುಟ : 4+2 ಬೆಲೆ: 3.00 ಬುಧವಾರ ಮಾರ್ಚ್ 25 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 50 Pages : 4+2 Price : 3.00 Wednesday March 25 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ಅಸ್ಪೃಶ್ಯತೆ ನಿರ್ಮೂಲನೆಗೆ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಾ ಆಡಳಿತ, ತಾಲೂಕ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಲಕ್ಷ್ಮೇಶ್ವರ ಪೋಲೀಸ್ ಇಲಾಖೆಯ ಸಹಯೋಗದಲ್ಲಿ ಮಾರ್ಚ್ 26ರಂದು ಸಂಜೆ 5 ಗಂಟೆಗೆ ಅಕ್ಕಿಗುಂದ ಗ್ರಾಮದಲ್ಲಿ ಅಸ್ಪೃಶ್ಯತೆ ನಿರ್ಮೂಲನೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ಸರ್ವ ಸದಸ್ಯರು, ಗಣ್ಯರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಿರಹಟ್ಟಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಲಕ್ಷ್ಮೇಶ್ವರದಲ್ಲಿ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಮ ಅವರ 119ನೇ ಜಯಂತಿ (05-04-2026) ಹಾಗೂ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ (14-04-2026) ಆಚರಣೆ ಸಂಬಂಧವಾಗಿ ಮಾರ್ಚ್ 26ರಂದು ಮಧ್ಯಾಹ್ನ 2:30ಕ್ಕೆ ಲಕ್ಷ್ಮೇಶ್ವರ ತಾಲೂಕ ಪಂಚಾಯತ್ ಸಭಾಭವನದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಎಲ್ಲಾ ತಾಲೂಕ ಮಟ್ಟದ ಅಧಿಕಾರಿಗಳು, ಎಸ್‌ಸಿ/ಎಸ್‌ಟಿ ಮುಖಂಡರು, ದಲಿತಪರ ಸಂಘಟನೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾಲಕ್ಕೆ ಆಗಮಿಸಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ತಹಶೀಲ್ದಾರರು ತಿಳಿಸಿದ್ದಾರೆ.

## ಮಾ. 30ರಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಮಾರ್ಚ್ 30 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ವಿ.ಸಿ. ಹಾಲ್‌ನಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ.

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆ ನೀಡಿದ್ದು, ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಸಭೆಗೆ ಹಾಜರಾಗಿ ಯೋಜನೆಗಳ ಅನುಷ್ಠಾನದ ಪ್ರಗತಿ ಕುರಿತು ಮಾಹಿತಿ ನೀಡುವಂತೆ ಸೂಚಿಸಲಾಗಿದೆ.

### 33 ಜನರಿಗೆ ಗಾಯ-21 ಜನ ವಶಕ್ಕೆ, ಗ್ರಾಮದಲ್ಲಿ ಉದ್ವಿಗ್ನತೆ-ಭಾರೀ ಪೊಲೀಸ್ ಬಂದೋಬಸ್ತ್..!

# ಚಿಕ್ಕವಡ್ಡಟ್ಟಿಯಲ್ಲಿ ಗುಂಪು ಘರ್ಷಣೆ..!

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕಿನ ಚಿಕ್ಕವಡ್ಡಟ್ಟಿ ಗ್ರಾಮದಲ್ಲಿ ಹಳೆ ವೈಷಮ್ಯ ಹಾಗೂ ನೀರಿನ ವಿಚಾರಕ್ಕೆ ಎಸ್ಸಿ ಮತ್ತು ಎಸ್ಟಿ ಸಮುದಾಯಗಳ ನಡುವೆ ತೀವ್ರ ಗುಂಪು ಘರ್ಷಣೆ ಸಂಭವಿಸಿ, ಒಟ್ಟು 33 ಜನರು ಗಾಯಗೊಂಡ ಘಟನೆ ಸೋಮವಾರ ಸಂಜೆ ನಡೆದಿದೆ. ಗಾಯಾಳುಗಳನ್ನು ಮುಂಡರಗಿ ತಾಲೂಕು ಆಸ್ಪತ್ರೆ ಮತ್ತು ಗದಗ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಭಾರೀ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ.

ಮಾಹಿತಿಯಂತೆ, ಸೋಮವಾರ ಸಂಜೆ ಎಸ್ಸಿ ಸಮುದಾಯದ ಯುವಕನೊಬ್ಬ ಎಸ್ಟಿ ಸಮುದಾಯದ ಜಮೀನಿನಲ್ಲಿರುವ ಬೋರ್‌ವೆಲ್ ಬಳಿ ನೀರು ಕುಡಿಯಲು ತೆರಳಿದ ವೇಳೆ ಮಾತಿನ ಚಕಮಕಿ ಉಂಟಾಗಿದೆ. ಈ ಸಣ್ಣ ವಿವಾದ ಕೆಲವೇ ಕ್ಷಣಗಳಲ್ಲಿ ತೀವ್ರ ಸ್ವರೂಪ ಪಡೆದು, ಎರಡೂ ಸಮುದಾಯಗಳ ಜನರು ಗುಂಪು ಸೇರಿ ಪರಸ್ಪರ ಕಲ್ಲು ತೂರಾಟ, ದೊಣ್ಣೆ ಹಾಗೂ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.



ಗ್ರಾಮದಲ್ಲಿ ಈ ಹಿಂದೆ ಜಾತ್ರೆ ಸಂದರ್ಭದಲ್ಲಿ ಕೂಡ ಇದೇ ಸಮುದಾಯಗಳ ನಡುವೆ ಗಲಾಟೆ ಸಂಭವಿಸಿದ್ದ ಹಿನ್ನೆಲೆಯಲ್ಲಿ, ಹಳೆಯ ವೈಷಮ್ಯ ಮತ್ತೊಮ್ಮೆ ತಲೆದೋರಿರುವುದು ಗಮನಾರ್ಹವಾಗಿದೆ. ಆ ವೇಳೆ ಯಾವುದೇ ದೂರು ದಾಖಲಾಗದಿದ್ದರೂ, ಈ ಬಾರಿ ಘಟನೆ ತೀವ್ರ ಸ್ವರೂಪ ಪಡೆದಿದ್ದು, ಕಾನೂನು ಕ್ರಮ ಕೈಗೊಳ್ಳಲಾಗಿದೆ.

ಇದರಿಂದ ಗ್ರಾಮಸ್ಥರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಶಾಂತಿ ಕಾಪಾಡಲು ಅಧಿಕಾರಿಗಳು ಹಾಗೂ ಹಿರಿಯರು ಮಧ್ಯಸ್ಥಿಕೆ ವಹಿಸಲು ಮುಂದಾಗಿದ್ದಾರೆ. ಸಣ್ಣ ವಿಷಯ ದೊಡ್ಡ ಘರ್ಷಣೆಗೆ ತಿರುಗಿದ ಘಟನೆ ಇದೀಗ ಜಿಲ್ಲೆಯಲ್ಲಿ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ಪರಿಸ್ಥಿತಿ ಹೇಗೆ ತಿರುಗುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ.

> "ಚಿಕ್ಕವಡ್ಡಟ್ಟಿ ಗ್ರಾಮದಲ್ಲಿ ನಡೆದ ಈ ಘರ್ಷಣೆ ಪ್ರಕರಣದಲ್ಲಿ ಎರಡು ಕಡೆಯಿಂದ ದೂರು ದಾಖಲಾಗಿದ್ದು, ಈಗಾಗಲೇ 21 ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಹಳೆ ವೈಷಮ್ಯ ಹಾಗೂ ನೀರಿನ ವಿಚಾರವೇ ಈ ಗಲಾಟೆಗೆ ಕಾರಣವಾಗಿದೆ. ಪ್ರಕರಣದ ಕುರಿತು ಸವಿಸ್ತಾರ ತನಿಖೆ ಮುಂದುವರಿದಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ. ಗ್ರಾಮದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಹೆಚ್ಚುವರಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ,"
>
> **– ರೋಹನ್ ಜಗದೀಶ್,** ಪೊಲೀಸ್ ವರಿಷ್ಠಾಧಿಕಾರಿ, ಗದಗ.

ಇದರಿಂದಾಗಿ ಗ್ರಾಮದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಘರ್ಷಣೆಯಲ್ಲಿ ಗಾಯಗೊಂಡ ಎಸ್ಟಿ ಸಮುದಾಯದ 9 ಜನರು ಮುಂಡರಗಿ ತಾಲೂಕು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

▸▸ 4ನೇ ಪುಟಕ್ಕೆ

### ಧಾರವಾಡದಲ್ಲಿ ಗ್ಯಾಸ್ ಕೊರತೆ ಇಲ್ಲ: ಅನಾವಶ್ಯಕ ಬುಕ್ಕಿಂಗ್ ಮಾಡಬೇಡಿ : ಜಿಲ್ಲಾಧಿಕಾರಿ ಸ್ನೇಹಲ್ ಆರ್ ಮನವಿ

# ಶ್ರೀ ರಾಮ ಎಚ್‌ಪಿ ಗ್ಯಾಸ್ ಏಜನ್ಸಿಗೆ ಅನಿರೀಕ್ಷಿತ ಭೇಟಿ ನೀಡಿದ ಡಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಗೃಹಬಳಕೆಯ ಗ್ಯಾಸ್ ಸಿಲಿಂಡರ್‌ಗಳ ಕೊರತೆ ಇಲ್ಲದಿದ್ದರೂ, ಅನಾವಶ್ಯಕ ಬುಕ್ಕಿಂಗ್‌ಗಳಿಂದ ಸರಬರಾಜಿನ ಮೇಲೆ ಒತ್ತಡ ಹೆಚ್ಚುತ್ತಿರುವುದು ಗಮನಕ್ಕೆ ಬಂದಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.

ಜಿಲ್ಲೆಯಲ್ಲಿ 16,822 ಗೃಹಬಳಕೆ ಸಿಲಿಂಡರ್‌ಗಳು ಪ್ರಸ್ತುತ ಲಭ್ಯವಿದ್ದು, ಪ್ರತಿದಿನ 10,000 ಸಿಲಿಂಡರ್‌ಗಳನ್ನು ಸಾರ್ವಜನಿಕರಿಗೆ ನಿಯಮಾನುಸಾರ ವಿತರಣೆ ಮಾಡಲಾಗುತ್ತಿದೆ. ಬುಕ್ಕಿಂಗ್ ಮಾಡಿದವರಿಗೆ ಸ್ವಲ್ಪ ವಿಳಂಬವಾದರೂ, ಎಲ್ಲರಿಗೂ ಗ್ಯಾಸ್ ಸಿಲಿಂಡರ್ ನೀಡಲಾಗುತ್ತಿದೆ ಎಂದು ಸ್ನೇಹಲ್ ಹೇಳಿದ್ದಾರೆ.

ಸ್ನೇಹಲ್ ಆರ್. ಅವರು ನಗರದಲ್ಲಿರುವ ಶ್ರೀ ರಾಮ ಎಚ್‌ಪಿ ಗ್ಯಾಸ್ ಏಜನ್ಸಿಗೆ ಅನಿರೀಕ್ಷಿತ ಭೇಟಿ ನೀಡಿ, ಗ್ಯಾಸ್ ವಿತರಣೆಯ ಸ್ಥಿತಿಗತಿ ಪರಿಶೀಲಿಸಿದರು. ಅಗತ್ಯವಿದ್ದವರು ಮಾತ್ರ ಗ್ಯಾಸ್ ಬುಕ್ ಮಾಡುವಂತೆ, ಸರಿಯಾದ ಮಾಹಿತಿಯನ್ನು ಗ್ರಾಹಕರಿಗೆ ನೀಡುವಂತೆ ಏಜೆನ್ಸಿಯ ಮಾಲೀಕರಿಗೆ ಹಾಗೂ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.




ಅನಧಿಕೃತವಾಗಿ ಗೃಹಬಳಕೆಯ ಸಿಲಿಂಡರ್‌ಗಳನ್ನು ಸಂಗ್ರಹಿಸುವುದು ಅಥವಾ ಒಂದು ಸಿಲಿಂಡರ್‌ನಿಂದ ಮತ್ತೊಂದು ಸಿಲಿಂಡರ್‌ಗೆ ವರ್ಗಾಯಿಸುವುದು ಕಾನೂನಿಗೆ ವಿರುದ್ಧವಾಗಿದ್ದು ಅಂಥವರ ವಿರುದ್ಧ 2000 ರ ರೂಪಾಯಿ ದಂಡ ಹಾಗೂ ಕಾನೂನು ಕ್ರಮ ಜರುಗಬಹುದು. ಅಂತಹ ಅನಧಿಕೃತ ಚಟುವಟಿಕೆ ಕಂಡುಬಂದಲ್ಲಿ, ಅಧಿಕಾರಿಗಳಿಗೆ ತಕ್ಷಣ ಮಾಹಿತಿ ನೀಡುವಂತೆ ಸಾರ್ವಜನಿಕರಲ್ಲಿ ವಿನಂತಿಸಿದ್ದಾರೆ.

> "ಅಗತ್ಯವಿದ್ದಾಗ ಮಾತ್ರ ಗ್ಯಾಸ್ ಬುಕ್ ಮಾಡಿ, ಎಲ್ಲರಿಗೂ ಸಮಾನವಾಗಿ ವಿತರಣೆ ಆಗಲು ಸಹಕರಿಸಿ. ವಿಳಂಬವಿದ್ದರೆ ಸಹ, ನಿಯಮಾನುಸಾರ ಗ್ಯಾಸ್‌ಗಳನ್ನು ನೀಡಲಾಗುತ್ತಿದೆ"
>
> **– ಸ್ನೇಹಲ್ ಆರ್, ಜಿಲ್ಲಾಧಿಕಾರಿ**

ಈ ಸಂದರ್ಭದಲ್ಲಿ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಶ್ರೀ ರಾಮ ಏಜೆನ್ಸಿಯ ಮಾಲೀಕರಾದ ಆನಂದ್ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಕೆ.ಎಚ್. ಪಾಟೀಲರ ಹೆಸರಿಗೆ ಧಕ್ಕೆ - ನಿರ್ವಹಣೆಯಲ್ಲಿ ವೈಫಲ್ಯ : ವಿಶ್ವನಾಥ ಶೀರಿ ಆರೋಪ

## ಕನಸಿನ ಕ್ರೀಡಾಂಗಣವೇ ಸಮಸ್ಯೆಗಳ ಗೂಡು!



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರವಾಸೋದ್ಯಮ ಮತ್ತು ಸಾಮಾಜಿಕ ಜಾಗೃತಿಯಲ್ಲಿ ವೇಗವಾಗಿ ಮುನ್ನಡೆಯುತ್ತಿರುವ ಗದಗ ಜಿಲ್ಲೆಯ ಮಧ್ಯಭಾಗದಲ್ಲಿರುವ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ತೀವ್ರವಾಗಿ ತಲೆದೋರಿದೆ. ಕ್ರೀಡಾಂಗಣದಲ್ಲಿರುವ ಸಿಂಥೆಟಿಕ್ ಟ್ರ್ಯಾಕ್ ಮೇಲೆ ಮಳೆನೀರು ನಿಂತಿರುವುದು ಹಾಗೂ ಹಲವೆಡೆ ರಂಧ್ರಗಳು ಕಾಣಿಸಿಕೊಂಡಿರುವುದು ಕ್ರೀಡಾಪಟುಗಳಿಗೆ ಮತ್ತು ವಾಯುವಿಹಾರಿಗಳಿಗೆ ದೊಡ್ಡ ತೊಂದರೆಯಾಗಿ ಪರಿಣಮಿಸಿದೆ ಎಂದು ಸಾಮಾಜಿಕ ಹೋರಾಟಗಾರ ವಿಶ್ವನಾಥ ಶೀರಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಿರಿಯ ರಾಜಕಾರಣಿ ಹಾಗೂ ಸಹಕಾರಿ ಕ್ಷೇತ್ರದ ಮುತ್ಸದ್ದಿ ದಿ. ಕೆ.ಎಚ್. ಪಾಟೀಲರ ಹೆಸರಿನಲ್ಲಿ ನಿರ್ಮಾಣಗೊಂಡ ಈ ಕ್ರೀಡಾಂಗಣವು ಜಿಲ್ಲೆಯ ಗೌರವದ ಸಂಕೇತವಾಗಿದ್ದು, ಅಧಿಕಾರಿಗಳ ನಿರ್ಲಕ್ಷ್ಯ ಪರಿಸ್ಥಿತಿ ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿಸಿದೆ. ವಿಶೇಷವಾಗಿ ಸಿಂಥೆಟಿಕ್ ಟ್ರ್ಯಾಕ್ ಹಾನಿಯಾಗುವ ಮುನ್ನವೇ ತುರ್ತು ದುರಸ್ತಿ ಕಾರ್ಯ ಕೈಗೊಳ್ಳಬೇಕೆಂಬ ಅವರು ಆಗ್ರಹ ಪಡಿಸಿದ್ದಾರೆ.


> "ಕ್ರೀಡಾಂಗಣದಲ್ಲಿ ಉಂಟಾದ ಸಮಸ್ಯೆಗಳನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು. ದಿ. ಕೆ.ಎಚ್. ಪಾಟೀಲರ ಕನಸಿನ ಕ್ರೀಡಾಂಗಣಕ್ಕೆ ಮತ್ತೆ ಜೀವ ತುಂಬುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ,"
>
> **–ವಿಶ್ವನಾಥ ಶೀರಿ,** ಸಾಮಾಜಿಕ ಹೋರಾಟಗಾರ.

ಇದೇ ವೇಳೆ ಕ್ರೀಡಾಂಗಣದಲ್ಲಿರುವ ಸಾರ್ವಜನಿಕ ಶೌಚಾಲಯಗಳ ಸ್ಥಿತಿ ಕೂಡ ಅತ್ಯಂತ ದುರಂತವಾಗಿದೆ. ಸ್ವಚ್ಛತೆ ಮತ್ತು ನಿರ್ವಹಣೆಯ ಕೊರತೆಯಿಂದಾಗಿ ಅವು ಬಳಕೆಗೆ ಅಸಾಧ್ಯವಾಗಿದ್ದು, ಸಾರ್ವಜನಿಕರು ಕ್ರೀಡಾಂಗಣದ ಸುತ್ತಮುತ್ತಲಿನ ಪ್ರದೇಶಗಳನ್ನು ಮೂತ್ರ ವಿಸರ್ಜನೆಗೆ ಬಳಸುವ ಅನಿವಾರ್ಯ ಪರಿಸ್ಥಿತಿ ಉಂಟಾಗಿದೆ ಎಂದು ವಿಶ್ವನಾಥ ಶೀರಿ ಆರೋಪಿಸಿದ್ದಾರೆ.

### "ಮನೋಹರ ಇನಾಮತಿ ಸ್ಮರಣೆ: ಸಹೋದರ ಅಪ್ಪಣ್ಣ ಅ.ಇನಾಮತಿ ನಡೆಸುವ 16ನೇ ವರ್ಷದ ಸೇವಾ ಕಾರ್ಯಕ್ರಮ"

## ಇಂದು ರಕ್ತದಾನ ಶಿಬಿರ ಬಡವರಿಗಾಗಿ ಊಟದ ವ್ಯವಸ್ಥೆ!

■ ವಿಜಯಸಾಕ್ಷಿ ಸುದ್ದಿ, ಗದಗ



ಕುರ್ತಕೋಟಿಯ ಜನನಾಯಕ ರಾಗಿದ್ದ ದಿ. ಮನೋಹರ ಅ. ಇನಾಮತಿ ಅವರ ಪುಣ್ಯಸ್ಮರಣೆ ಅಂಗವಾಗಿ ವಿವಿಧ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬಡಜನರ ಕಲ್ಯಾಣಕ್ಕಾಗಿ ತಮ್ಮ ಜೀವನವನ್ನೇ ಅರ್ಪಿಸಿದ್ದ ಇನಾಮತಿ ಅವರು ಅಗಲಿ 17 ವರ್ಷಗಳಾದರೂ, ಅವರ ಸೇವೆಗಳನ್ನು ಜನರು ಇಂದಿಗೂ ಸ್ಮರಿಸುತ್ತಿದ್ದಾರೆ.

ಅವರ ಸಹೋದರರಾದ ಅಪ್ಪಣ್ಣ ಅ. ಇನಾಮತಿ ಸಾಹುಕಾರರು ಸಹ ತಮ್ಮ ಅಣ್ಣನ ಆದರ್ಶಗಳನ್ನು ಅನುಸರಿಸುತ್ತಾ, ಗ್ರಾಮೀಣ ಭಾಗದ ಬಡಜನರ ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ಜನಪ್ರಿಯ ಹಾಗೂ ಸೃಜನಶೀಲ ರಾಜಕಾರಣಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ದಿ. ಮನೋಹರ ಅ. ಇನಾಮತಿ ಅವರ ಸ್ಮರಣಾರ್ಥವಾಗಿ, ದಿ. 25-03-2011ರಿಂದ ಪ್ರತಿ ವರ್ಷ ಉಚಿತ ರಕ್ತದಾನ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಗುತ್ತಿದ್ದು, ಈ ಬಾರಿ 16ನೇ ವರ್ಷದ ಶಿಬಿರ ನಡೆಯಲಿದೆ.

ಇದೇ ಸಂದರ್ಭದಲ್ಲಿ, ಗದಗದ ಕೆ.ಎಚ್. ಪಾಟೀಲ್ ಜಿಲ್ಲಾ ಆಸ್ಪತ್ರೆಯಲ್ಲಿ ನಿರ್ಮಾಣಗೊಂಡಿರುವ "ಬುತ್ತಿ ಹಸಿದವರಿಗೆ ಮುಕ್ತಿ" ಯೋಜನೆಯಡಿ ಬಡವರಿಗೆ ಅತಿ ಕಡಿಮೆ ವೆಚ್ಚದಲ್ಲಿ ಊಟದ ವ್ಯವಸ್ಥೆಯನ್ನು ಪ್ರಾರಂಭಿಸಲಾಗಿದೆ. ಈ ಯೋಜನೆಗೆ ಸಚಿವರಾದ ಎಚ್.ಕೆ. ಪಾಟೀಲರು ಚಾಲನೆ ನೀಡಿದ್ದಾರೆ.

ಇನ್ನು ಮುಂದೆಯೂ ಪ್ರತಿ ವರ್ಷ ಮಾರ್ಚ್ 25ರಂದು ಪುಣ್ಯಸ್ಮರಣೆಯ ಅಂಗವಾಗಿ, ತಮ್ಮ ಸ್ವಂತ ಖರ್ಚಿನಲ್ಲಿ ಒಂದು ದಿನದ ಊಟದ ವ್ಯವಸ್ಥೆಯನ್ನು ಮಾಡಲು ಅಪ್ಪಣ್ಣ ಅ. ಇನಾಮತಿ ನಿರ್ಧರಿಸಿದ್ದಾರೆ ಎಂದು ಅಭಿಮಾನಿ ಬಳಗದ ಭಕ್ಷಿ ತಹಸೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ಷಯರೋಗ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸೋಣ: ಡಾ. ಎಸ್.ಎಸ್. ನೀಲಗುಂದ

■ ವಿಜಯಸಾಕ್ಷಿ ಸುದ್ದಿ, ಗದಗ

ಕ್ಷಯರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸಲು ಸಮಗ್ರ ಪ್ರಯತ್ನ ಅಗತ್ಯವಾಗಿದ್ದು, ಇದಕ್ಕಾಗಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಹೇಳಿದರು.

ನಗರದ ಡಾ. ಎಸ್.ವಿ.ಎಚ್. ತೋಟಗಂಟಿಮಠ ನರ್ಸಿಂಗ್ ಕಾಲೇಜಿನಲ್ಲಿ ಮಂಗಳವಾರ ನಡೆದ ವಿಶ್ವ ಕ್ಷಯರೋಗ ದಿನಾಚರಣೆಯ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.



▸▸ 3ನೇ ಪುಟಕ್ಕೆ

## ಪೆಟ್ರೋಲ್, ಡೀಸೆಲ್ ಕೊರತೆ ಬಗ್ಗೆ ವದಂತಿ: ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಸ್ಪಷ್ಟನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ಸುದ್ದಿಗಳ ಪರಿಣಾಮವಾಗಿ ಪೆಟ್ರೋಲ್ ಬಂಕ್‌ಗಳ ಮುಂದೆ ಜನರು ಮುಗಿಬಿದ್ದು ಆತಂಕದ ವಾತಾವರಣ ನಿರ್ಮಾಣವಾಗುತ್ತಿದೆ.

ದೇಶಕ್ಕೆ ಅಗತ್ಯವಿರುವ ಕಚ್ಚಾ ತೈಲ, ಅನಿಲ ಮತ್ತು ರಸಗೊಬ್ಬರಗಳ ಪೂರೈಕೆ ಯುದ್ಧದ ಸವಾಲುಗಳ ನಡುವೆಯೂ ನಿರಂತರವಾಗಿ ನಡೆಯುತ್ತಿದ್ದು, ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ಸರಬರಾಜಿನಲ್ಲಿ ಯಾವುದೇ ವ್ಯತ್ಯಯ ಉಂಟಾಗುವುದಿಲ್ಲ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಿಳಿಸಿದ್ದಾರೆ.

ಇತ್ತೀಚೆಗೆ ಪೆಟ್ರೋಲ್ ಕೊರತೆ ಉಂಟಾಗಲಿದೆ ಎಂಬ ವದಂತಿ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿರುವ ಹಿನ್ನೆಲೆಯಲ್ಲಿ, ನಾಗರಿಕರು ಆತಂಕಗೊಂಡು ಬಂಕ್‌ಗಳತ್ತ ದೌಡಾಯಿಸುತ್ತಿದ್ದಾರೆ. ಇದರಿಂದ ಅನಾವಶ್ಯಕ ಗೊಂದಲ ಮತ್ತು ಜನಸಂದಣಿ ಉಂಟಾಗಿದೆ.

ಸಂಬಂಧಿತ ಅಧಿಕಾರಿಗಳು ಹಾಗೂ ಪೆಟ್ರೋಲ್ ವಿತರಕರು ಯಾವುದೇ ಕೊರತೆ ಇಲ್ಲವೆಂದು ಸ್ಪಷ್ಟಪಡಿಸಿದ್ದು, ಸಾರ್ವಜನಿಕರು ಇಂತಹ ಸುಳ್ಳು ಸುದ್ದಿಗಳಿಗೆ ಕಿವಿಗೊಡದೆ ಶಾಂತವಾಗಿರಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ನಾಳೆ ಸಾಯಿಬಾಬಾ ದೇವಸ್ಥಾನದ ವಾರ್ಷಿಕೋತ್ಸವ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಈಶ್ವರ ನಗರದಲ್ಲಿರುವ ಶ್ರೀ ಸಾಯಿಬಾಬಾ ದೇವಸ್ಥಾನದ 11ನೇ ವಾರ್ಷಿಕೋತ್ಸವವು ಮಾ.26ರ ಗುರುವಾರದಂದು ನಡೆಯಲಿದೆ ಎಂದು ಗುರುಪಾದಪ್ಪ ಬೆಲ್ಲದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂದು ಬೆಳಗ್ಗೆ 6ಕ್ಕೆ ಸಾಯಿಬಾಬಾ ದೇವರಿಗೆ ರುದ್ರಾಭಿಷೇಕ ಜರುಗಲಿದ್ದು, ರುದ್ರಮುನಿ ಶಾಸ್ತ್ರಿಗಳು ಈ ಕಾರ್ಯವನ್ನು ನೆರವೇರಿಸಲಿದ್ದಾರೆ.

8 ಗಂಟೆಗೆ ಶ್ರೀ ಸತ್ಯ ನಾರಾಯಣ ಪೂಜೆ ಜರುಗಲಿದ್ದು, ಇದನ್ನು ಶ್ರೀ ದತ್ತಾತ್ರೇಯ ದೇವಸ್ಥಾನದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿಯವರು ನೆರವೇರಿಸಲಿದ್ದಾರೆ. ದೇವಸ್ಥಾನದ ಅರ್ಚಕ ಮಲ್ಲಪ್ಪ ಸಂಗನಾಳ ಉಪಸ್ಥಿತರಿದ್ದು ಕಾರ್ಯಕ್ರಮಗಳ ಮೇಲುಸ್ತುವಾರಿ ವಹಿಸಲಿದ್ದಾರೆ.

ಮಧ್ಯಾನ್ಹ 1 ಗಂಟೆಗೆ ಅನ್ನಸಂತರ್ಪಣೆ ಜರುಗಲಿದ್ದು, ಭಕ್ತಾದಿಗಳು ಈ ಎಲ್ಲ ಕಾರ್ಯಗಳಲ್ಲಿ ಪಾಲ್ಗೊಂಡು ಶ್ರೀ ಸಾಯಿಬಾಬಾರ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

---

**ದಾವಣಗೆರೆ ಉಪಚುನಾವಣೆ : ಮುಸ್ಲಿಮರಿಗೆ ಶಾಸಕ ಪ್ರದೀಪ್ ಈಶ್ವರ್ ಮನವಿ**

# ನಿಮ್ಮ ದೇಶಭಕ್ತಿ ಪ್ರಶ್ನಿಸುವ ಅಯೋಗ್ಯರಿಗೆ ಮತ ಹಾಕಬೇಡಿ



■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಮುಸ್ಲಿಮರ ದೇಶಭಕ್ತಿಯನ್ನು ಪ್ರಶ್ನಿಸಿದ, ಅವರ ಕುಟುಂಬಗಳ ಮಹಿಳೆಯರ ಬಗ್ಗೆ ಹೀನಾಯವಾಗಿ ಮಾತನಾಡಿದ್ದು ಬಿಜೆಪಿ. ಇವತ್ತು ಯಾವುದೋ ಅಸಮಾಧಾನಕ್ಕೆ ಬಿಜೆಪಿಗೆ ಮತ ಹಾಕದರೆ ನಿಮ್ಮ ಅಸ್ತಿತ್ವಕ್ಕೆ ಕುತ್ತು ಬರುತ್ತದೆ. ಇಂತಹ ಅಯೋಗ್ಯರಿಗೆ ಮತ ಹಾಕಬೇಡಿ ಎಂದು ಶಾಸಕ ಪ್ರದೀಪ್ ಈಶ್ವರ್ ಮನವಿ ಮಾಡಿದ್ದಾರೆ.

ಅಲ್ಪಸಂಖ್ಯಾತ ಸಮುದಾಯದ ಹಿತವನ್ನು ಕಾಂಗ್ರೆಸ್ ಮಾತ್ರ ಕಾಪಾಡಲು ಸಾಧ್ಯ. ಹೊಸ ತಲೆಮಾರು ರಾಜಕಾರಣಕ್ಕೆ ಬರಬೇಕು. ಇದಕ್ಕೆ ಅವಕಾಶ ಮಾಡಿಕೊಡಬೇಕು ಎಂದಿದ್ದಾರೆ.

ಈಗಾಗಲೇ ಅಲ್ಪಸಂಖ್ಯಾತ ಸಮುದಾಯಕ್ಕೆ ಕಾಂಗ್ರೆಸ್ ಸಾಕಷ್ಟು ಅವಕಾಶ ಮತ್ತು ಸವಲತ್ತುಗಳನ್ನು ನೀಡಿದೆ. ಸಚಿವ ಸಂಪುಟ, ವಿಧಾನಸಭೆಯ ಅಧ್ಯಕ್ಷ ಸ್ಥಾನವನ್ನು ಮುಸ್ಲಿಂ ಸಮುದಾಯಕ್ಕೆ ನೀಡಿದೆ. ಇದೇ ಕಾರಣಕ್ಕೆ ಕಾಂಗ್ರೆಸ್ ಓಲೈಕೆ ರಾಜಕಾರಣ ಮಾಡುತ್ತಿದೆ ಎಂಬ ಟೀಕೆಗೆ ಗುರಿ ಆಗಿದೆ.ಅಲ್ಪಸಂಖ್ಯಾತ ಸಮುದಾಯದ ಜನರು ಇದನ್ನು ಅರ್ಥ ಮಾಡಿಕೊಂಡು ಮತಚಲಾವಣೆ ಮಾಡಬೇಕು ಎಂದು ಕೋರಿದ್ದಾರೆ.

---

**ಬೇಸಿಗೆ ರಜೆಯಲ್ಲಿ ಓದು ಅಭ್ಯಾಸಕ್ಕೆ ಉತ್ತೇಜನ : ಆಕರ್ಷಕ ಬಹುಮಾನಗಳ ಘೋಷಣೆ!**

# ಮಕ್ಕಳಿಗಾಗಿ 'ಭೈರ' ಕಾದಂಬರಿ ರಸಪ್ರಶ್ನೆ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ನರಗುಂದ

ಮಕ್ಕಳಲ್ಲಿ ಓದು ಅಭ್ಯಾಸ ಬೆಳೆಸುವ ಉದ್ದೇಶದಿಂದ ಕಂಚುಗಾರನಹಳ್ಳಿ ಸತೀಶ್ ರಚಿಸಿರುವ "ಭೈರ" ಮಕ್ಕಳ ಕಾದಂಬರಿಯ ಆಧಾರಿತ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.

ಸರಳ ಭಾಷೆ ಮತ್ತು ವಿಶೇಷ ಕಥಾವಸ್ತು ಹೊಂದಿರುವ 74 ಪುಟಗಳ "ಭೈರ" ಕಾದಂಬರಿಯು ಈಗಾಗಲೇ ಮಕ್ಕಳಲ್ಲಿ ಮನೆಮಾತಾಗಿದ್ದು, ಶಿವಮೊಗ್ಗ ಕರ್ನಾಟಕ ಸಂಘದ ನಾ. ಡಿಸೋಜ ಮಕ್ಕಳ ಸಾಹಿತ್ಯ ಪ್ರಶಸ್ತಿ (2024), ಬೆಳಗಾವಿಯ ಹೊಂಬೆಳಕು ಪ್ರತಿಷ್ಠಾನದ ರಾಷ್ಟ್ರಕೂಟ ಸಾಹಿತ್ಯ ಶ್ರೀ ಪ್ರಶಸ್ತಿ ಹಾಗೂ ಬೆಂಗಳೂರಿನ ಕರ್ನಾಟಕ ಸಾಹಿತ್ಯ ಪರಿಷತ್ತಿನ ಸಾರಂಗಿ ವೆಂಕಟರಾಮಯ್ಯ ಶ್ರೀನಿವಾಸರಾವ್ ಪುಸ್ತಕದತ್ತಿ ಪ್ರಶಸ್ತಿಗಳನ್ನು ಪಡೆದುಕೊಂಡಿದೆ.

ಸ್ಪರ್ಧೆಯಲ್ಲಿ 6 ರಿಂದ 16 ವರ್ಷದೊಳಗಿನ ಮಕ್ಕಳು ಭಾಗವಹಿಸಬಹುದಾಗಿದೆ. ಭಾಗವಹಿಸುವವರು ರೂ. 120 ಶುಲ್ಕ ನೀಡಿ "ಭೈರ" ಕಾದಂಬರಿಯನ್ನು ಪಡೆದುಕೊಳ್ಳಬೇಕು. ಪುಸ್ತಕವನ್ನು ಪಡೆಯಲು ಎಪ್ರಿಲ್ 20 ಕೊನೆಯ ದಿನಾಂಕವಾಗಿದ್ದು, ಓದಲು 15 ರಿಂದ 20 ದಿನಗಳ ಕಾಲಾವಕಾಶ ನೀಡಲಾಗಿದೆ.




ಎಪ್ರಿಲ್ 30ರಂದು ನಡೆಯುವ ರಸಪ್ರಶ್ನೆ ಸ್ಪರ್ಧೆಯಲ್ಲಿ ಮೊಬೈಲ್ ಆಪ್ ಮೂಲಕ ಕಾದಂಬರಿಯ ಆಧಾರಿತ ಪ್ರಶ್ನೆಗಳಿಗೆ ಉತ್ತರಿಸಬೇಕಿದ್ದು, ಉತ್ತರಿಸುವ ಸಮಯವೂ ದಾಖಲೆಯಾಗುತ್ತದೆ. ಮೇ 5ರಂದು ಫಲಿತಾಂಶ ಪ್ರಕಟವಾಗಲಿದೆ.

ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಹಾಗೂ ಸಮಾಧಾನಕರ ಬಹುಮಾನಗಳನ್ನು ನೀಡಲಾಗುತ್ತದೆ. ಪ್ರಥಮ ಬಹುಮಾನ ರೂ. 750, ದ್ವಿತೀಯ ರೂ.600, ತೃತೀಯ ರೂ.450 ಹಾಗೂ ಸಮಾಧಾನಕರ ರೂ.300 ನೀಡಲಾಗುತ್ತದೆ. ಬಹುಮಾನ ಮೊತ್ತವನ್ನು ಫೋನ್‌ಪೇ ಮೂಲಕ ನೀಡಲಾಗುವುದರ ಜೊತೆಗೆ ಆಕರ್ಷಕ ಪ್ರಮಾಣಪತ್ರವನ್ನು ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ 9945095539 ಹಾಗೂ 9972932126 ಸಂಖ್ಯೆಗೆ ಸಂಪರ್ಕಿಸಲು ಆಯೋಜಕರು ತಿಳಿಸಿದ್ದಾರೆ. ಈ ಸ್ಪರ್ಧೆಯಲ್ಲಿ ತಮ್ಮ ಮಕ್ಕಳನ್ನು ಭಾಗವಹಿಸಲು ಪೋಷಕರು ಪ್ರೋತ್ಸಾಹಿಸಬೇಕೆಂದು ಆಯೋಜಕರಾದ ಭುವನೇಶ್ವರಿ ರು. ಅಂಗಡಿ ಮನವಿ ಮಾಡಿದ್ದಾರೆ.

---

**ತೂತುಕುಡಿ ಸಾತನ್‌ಕುಳಂ ತಂದೆ-ಮಗನ ಕಸ್ಟಡಿ ಸಾವು ಪ್ರಕರಣ**

# ಒಂಬತ್ತು ಪೊಲೀಸರು ದೋಷಿಗಳು ಎಂದ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ತಮಿಳುನಾಡು

ತಮಿಳುನಾಡಿನ ತೂತುಕುಡಿ ಜಿಲ್ಲೆಯ ಸಾತನ್‌ಕುಳಂ ಪೊಲೀಸ್ ಠಾಣೆಯಲ್ಲಿ ಕೋವಿಡ್-19 ಲಾಕ್‌ಡೌನ್ ಸಮಯದಲ್ಲಿ ಸಂಭವಿಸಿದ, ವ್ಯಾಪಾರಿ ಪಿ. ಜಯರಾಜ್ (58) ಮತ್ತು ಅವರ ಮಗ ಜೆ. ಬೆನಿಕ್ಸ್ (31) ಅವರ ಕಸ್ಟಡಿ ಸಾವು ಪ್ರಕರಣದ ಆರೋಪಿಗಳಾದ ಎಲ್ಲಾ ಒಂಬತ್ತು ಪೊಲೀಸ್ ಸಿಬ್ಬಂದಿಯನ್ನು ದೋಷಿಗಳು ಎಂದು ಸೋಮವಾರ (ಮಾರ್ಚ್ 23, 2026) ನ್ಯಾಯಾಲಯ ಘೋಷಿಸಿದೆ.

ತಂದೆ ಮಗ ಪೊಲೀಸ್ ಕಸ್ಟಡಿಯಲ್ಲಿ ಚಿತ್ರ ಹಿಂಸೆಯಿಂದ ಸಾವನ್ನಪ್ಪಿದ ಸುಮಾರು ಆರು ವರ್ಷಗಳ ನಂತರ, ಮದುರೈನ ಒಂದನೇ



ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ. ನ್ಯಾಯಾಧೀಶ ಜಿ. ಮುತ್ತುಕುಮಾರನ್ ಅವರು ಮಾರ್ಚ್ 30ರಂದು ಶಿಕ್ಷೆ ಪ್ರಮಾಣವನ್ನು ಪ್ರಕಟಿಸುವುದಾಗಿ ಹೇಳಿದ್ದು, ಅಲ್ಲಿಯವರೆಗೆ ಅಪರಾಧಿಗಳ ನ್ಯಾಯಾಂಗ ಬಂಧನವನ್ನು ವಿಸ್ತರಿಸಿದ್ದಾರೆ.

ನ್ಯಾಯಾಧೀಶರು ಆರೋಪಿಗಳಾದ ಪೊಲೀಸ್ ಸಿಬ್ಬಂದಿಯನ್ನು ಕೊಲೆ ಮತ್ತು ಭಾರತೀಯ ದಂಡ ಸಂಹಿತೆಯ (ಐಪಿಸಿ) ಇತರ ಸೆಕ್ಷನ್‌ಗಳಡಿ ದೋಷಿಗಳೆಂದು ಘೋಷಿಸಿದ್ದಾರೆ. ಅಪರಾಧಿಗಳಾದ ಪೊಲೀಸ್ ಸಿಬ್ಬಂದಿಯ ವೈದ್ಯಕೀಯ ಸ್ಥಿತಿಗತಿಯ ಬಗ್ಗೆ ನ್ಯಾಯಾಧೀಶರು ವರದಿಯನ್ನು ಕೇಳಿದ್ದು, ಮದುರೈ ಕೇಂದ್ರ ಕಾರಾಗೃಹದ ಅಧೀಕ್ಷಕರಿಗೆ ಅಪರಾಧಿಗಳನ್ನು ಮದುರೈನ ಸರ್ಕಾರಿ ರಾಜಾಜಿ ಆಸ್ಪತ್ರೆಯ ವೈದ್ಯಕೀಯ ಮಂಡಳಿಯ ಮುಂದೆ ಹಾಜರುಪಡಿಸಲು ಸೂಚಿಸಿದ್ದಾರೆ. ಅವರ ಕೊನೆಯ ಆಸ್ತಿ ವಿವರ ಮತ್ತು ಸಂಬಳದ ಪ್ರಮಾಣಪತ್ರಗಳ ವರದಿಯನ್ನು ಸಲ್ಲಿಸುವಂತೆ ಸೂಚಿಸಿದ್ದಾರೆ.

ಅಷ್ಟೇ ಅಲ್ಲದೆ, ಶಿಕ್ಷೆಯ ಪ್ರಮಾಣವನ್ನು ನಿರ್ಧರಿಸಲು ಸಹಕಾರಿಯಾಗುವಂತಹ ಪೂರಕ ಅಥವಾ ತಗ್ಗಿಸುವ ಸಂದರ್ಭಗಳ (aggravating/mitigating circumstances) ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ವರದಿಯನ್ನು ನ್ಯಾಯಾಲಯ ಕೇಳಿದೆ.

ಶಿಕ್ಷೆ ನೀಡುವ ಮೊದಲು ನ್ಯಾಯಾಲಯವು 'ಈ ಅಪರಾಧ ಎಷ್ಟು ಘೋರವಾಗಿದೆ?' ಮತ್ತು 'ಅಪರಾಧಿಗೆ ರಿಯಾಯಿತಿ ನೀಡಲು ಯಾವುದಾದರೂ ಮಾನವೀಯ ಕಾರಣಗಳಿವೆಯೇ?' ಎಂದು ಪರಿಶೀಲಿಸಲು ಈ ವರದಿಗಳನ್ನು ಕೇಳುತ್ತದೆ.

---

# ಲಕ್ಷ್ಮೇಶ್ವರದಲ್ಲಿ ದೇವರ ದಾಸಿಮಯ್ಯ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ದೇವರ ದಾಸಿಮಯ್ಯ ಅವರ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಿಆರ್‌ಪಿ ಸಂಪನ್ಮೂಲ ವ್ಯಕ್ತಿ ಶ್ರೀನಿವಾಸ ಮತ್ತೂರ ಮಾತನಾಡಿ, ದೇವರ ದಾಸಿಮಯ್ಯ 10ನೇ ಶತಮಾನದ ಕನ್ನಡದ ಆದ್ಯ ವಚನಕಾರರಲ್ಲೊಬ್ಬರಾಗಿದ್ದು, "ಕಾಯಕವೇ ಕೈಲಾಸ" ಎಂಬ ತತ್ವವನ್ನು ನಂಬಿ ನೇಕಾರಿಕೆ ಮೂಲಕ ಜೀವನ ನಡೆಸಿ ಸಮಾಜಕ್ಕೆ ಮಹತ್ವದ ಸಂದೇಶಗಳನ್ನು ನೀಡಿದರು ಎಂದು ಹೇಳಿದರು.

ರಾಮನಾಥ ಅಂಕಿತದೊಂದಿಗೆ ಸರಳ, ತೀಕ್ಷ್ಣ ವೈಚಾರಿಕತೆ ಹಾಗೂ ಭಕ್ತಿ ಭರಿತ ಸುಮಾರು 176ಕ್ಕೂ ಹೆಚ್ಚು ವಚನಗಳನ್ನು ರಚಿಸಿ ವಚನ ಸಾಹಿತ್ಯಕ್ಕೆ ಭದ್ರ ಅಡಿಪಾಯ ಹಾಕಿದ ಕೀರ್ತಿ ಇವರಿಗೆ ಸಲ್ಲುತ್ತದೆ ಎಂದು ಅವರು ವಿವರಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ಬಸವರಾಜ ಕುಂಬಾರ ಮಾತನಾಡಿ, ದಾಸಿಮಯ್ಯನವರು ಕೇವಲ ವಚನಕಾರರಾಗಿರದೆ ಸಾಮಾಜಿಕ ಕ್ರಾಂತಿಗೆ ಮುನ್ನುಡಿ ಬರೆದ ಮಹಾಪುರುಷರಾಗಿದ್ದಾರೆ. ಅವರ ವಚನಗಳು ಸರಳವಾಗಿಯೂ ಅರ್ಥಗರ್ಭಿತವಾಗಿಯೂ ಇರುವುದರಿಂದ ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಹೆಚ್.ಡಿ. ನಿಂಗರಡ್ಡಿ, ಆರ್.ಎಂ. ಶಿರಹಟ್ಟಿ, ಎಲ್.ಎ. ಬಣಕಾರ, ಆರ್.ಕೆ. ಉಪನಾಳ, ನೇತ್ರಾವತಿ ಕುಂಬಾರ, ಗೀತಾ ಗುರಿಕಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

**ಬಾಲಕಿಯರ ವಸತಿ ನಿಲಯದ ವಿದ್ಯಾರ್ಥಿನಿಯರಿಗೆ ಔಷಧ ಕಿಟ್ ವಿತರಣೆ**

# ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ರೂಪಿಸಿದೆ. ವಿಶೇಷವಾಗಿ ಶಿಕ್ಷಣಕ್ಕೆ ಹೆಚ್ಚಿನ ಒತ್ತಡ ನೀಡುವ ಯೋಜನೆಗಳ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಸದುಪಯೋಗ ಮಾಡಿಕೊಳ್ಳಬೇಕು ಎಂದು ಗದಗ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹನಬರಟ್ಟಿ ತಿಳಿಸಿದ್ದಾರೆ.

ಗದುಗಿನ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ವೃತ್ತಿಪರ ಬಾಲಕಿಯರ ವಸತಿ ನಿಲಯದಲ್ಲಿ ಆಯುಷ್ ಇಲಾಖೆಯ ಬಾಲಕಿಯರಿಗೆ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಹಮ್ಮಿಕೊಂಡಿದ್ದ 'ವಿದ್ಯಾರ್ಥಿ ಚೇತನ' ಕಾರ್ಯಕ್ರಮದಲ್ಲಿ ಔಷಧಿ ಕಿಟ್ ವಿತರಿಸಿ ಅವರು



ಮಾತನಾಡಿದರು.

ಆಯುಷ್ ಇಲಾಖೆಯು ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ಚೇತನ ವಿನೂತನ ಕಾರ್ಯಕ್ರಮದ ಮೂಲಕ ದೈಹಿಕ ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳ ನಿವಾರಣೆಗೆ ಮಾರ್ಗೋಪಾಯಗಳನ್ನು ಕೊಡುತ್ತಿದೆ. ಇದರಿಂದ ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಮತ್ತು ವೈಚಾರಿಕತೆ ಮೂಡಿಸುತ್ತಿದೆ ಎಂದರು.

ವಿದ್ಯಾರ್ಥಿಗಳಿಗೆ ಯೋಗ, ಧ್ಯಾನ, ಹಾಗೂ ಆರೋಗ್ಯದಲ್ಲಿ ಸಮತೋಲನ ಕಾಯ್ದುಕೊಳ್ಳುವ ಕುರಿತು ಮಾರ್ಗದರ್ಶನ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಶ್ರದ್ಧೆಯಿಂದ ಇಷ್ಟಪಟ್ಟು ಅಭ್ಯಾಸ ಮಾಡಬೇಕು ಮತ್ತು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಆಸಕ್ತಿ ಹೊಂದಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಅಶೋಕ ಮತ್ತಿಗಟ್ಟಿ ಅವರು ಮಾತನಾಡಿ, ವಿದ್ಯಾರ್ಥಿಗಳು ಒತ್ತಡ ರಹಿತ ಜೀವನ ನಡೆಸಬೇಕು. ಮನೋವಿಕಾಸ ಮತ್ತು ವ್ಯಕ್ತಿತ್ವ ವಿಕಾಸಕ್ಕೆ ಪೂರಕವಾಗಿರುವ ಒಳ್ಳೆಯ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು. ಅಭ್ಯಾಸ ಮತ್ತು ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದರು.

ವಿದ್ಯಾರ್ಥಿ ಚೇತನ ಯೋಜನೆಯ ನಿರ್ವಹಣಾಧಿಕಾರಿ ಡಾ. ಸಾಯಿಪ್ರಕಾಶ ಮಡಿವಾಳ ಅವರು ಔಷಧ ಕಿಟ್‌ಗಳಲ್ಲಿ ಇರುವ ಔಷಧಿಗಳ ಮಾಹಿತಿ ಮತ್ತು ಅವುಗಳನ್ನು ಬಳಸುವ ವಿಧಾನವನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು. ವಸತಿ ನಿಲಯದ 250 ವಿದ್ಯಾರ್ಥಿನಿಯರಿಗೆ ಔಷಧ ಕಿಟ್‌ಗಳು ಮತ್ತು ವಸತಿ ನಿಲಯಕ್ಕೆ ಐಇಸಿ ಎರಡು ಪ್ರೇಮ್‌ಗಳನ್ನು ಆಯುಷ್ ಇಲಾಖೆ ವಿತರಿಸಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸುಕತೆಯಿಂದ ಪಾಲ್ಗೊಂಡು ಆರೋಗ್ಯದ ಸಂಬಂಧಿಸಿದ ಪ್ರಶ್ನೆಗಳಿಗೆ ಉತ್ತರವನ್ನು ಪಡೆದುಕೊಂಡರು.

---

**4 ವರ್ಷದ ಬಾಲಕಿಯ ಮೇಲಿನ ಅತ್ಯಾಚಾರ ಪ್ರಕರಣ**

# ಪೊಲೀಸರನ್ನು ತರಾಟೆಗೆ ತೆಗೆದುಕೊಂಡ ಸುಪ್ರೀಂ ಕೋರ್ಟ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹರಿಯಾಣದ ಗುರುಗ್ರಾಮದಲ್ಲಿ ನಾಲ್ಕು ವರ್ಷದ ಬಾಲಕಿಯ ಮೇಲೆ ನಡೆದ ಅತ್ಯಾಚಾರ ಪ್ರಕರಣವನ್ನು ನಿರ್ವಹಿಸಿದ ಬಗ್ಗೆ ಹರಿಯಾಣ ಪೊಲೀಸರು ಮತ್ತು ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಅವರನ್ನು ಸುಪ್ರೀಂ ಕೋರ್ಟ್ ಸೋಮವಾರ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದೆ. ಮಗುವಿನೊಂದಿಗೆ ವ್ಯವಹರಿಸುವಲ್ಲಿ ಗಂಭೀರ ಲೋಪ ಮತ್ತು ಸೂಕ್ಷ್ಮತೆಯ ಕೊರತೆಯನ್ನು ಸಹ ಎತ್ತಿ ತೋರಿಸಿದೆ.

ಮುಖ್ಯ ನ್ಯಾಯಮೂರ್ತಿ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠವು, ತನಿಖೆ ಮತ್ತು ಮಗುವಿನ ಹೇಳಿಕೆಯನ್ನು ದಾಖಲಿಸಿದ ಸಂದರ್ಭಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿತು.

"ಪೊಲೀಸರು ಹೀಗೇಕೆ ಅಸೂಕ್ಷ್ಮರಾಗಿದ್ದಾರೆ? ಮೆಟ್ರೋಪಾಲಿಟನ್ ನಗರ ಎಂದು ಕರೆಯಲ್ಪಡುವಲ್ಲಿ, ಹೀಗೆ ನಡೆಯುತ್ತಿದೆ! ನೀವು ಆಘಾತಕ್ಕೊಳಗಾದ ಮಗುವಿನೊಂದಿಗೆ ವ್ಯವಹರಿಸುತ್ತಿದ್ದೀರಿ" ಎಂದು ವಿಚಾರಣೆಯ ಸಮಯದಲ್ಲಿ ಸಿಜೆಐ ಗಮನಿಸಿದರು.

ಪೊಲೀಸರು ಬಲಿಪಶುವಿನ ಪೋಷಕರನ್ನು 'ನೀವು ಹೇಗೆ ಮುಂದುವರಿಯಲು ಬಯಸುತ್ತೀರಿ' ಎಂದು ಕೇಳಿದ್ದಾರೆ; ಇದು ಆಘಾತಕಾರಿ ಎಂದು ನ್ಯಾಯಾಲಯ ಹೇಳಿದೆ. "ಎಫ್‌ಐಆರ್ ದಾಖಲಿಸುವುದು ಅವರ ಕರ್ತವ್ಯವಲ್ಲವೇ? ಅವರಿಗೆ ಕಾನೂನಿನ ಮೂಲಭೂತ ಅಂಶಗಳು ಅರ್ಥವಾಗುತ್ತಿಲ್ಲವೇ?" ಎಂದು ಪೀಠವು ಟೀಕಿಸಿತು.

---

# ಗೈರು ಹಾಜರಾದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಸಿಇಓಗೆ ವರದಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಅಭಿವೃದ್ಧಿ ಚರ್ಚೆಗೆ ನಿಗದಿಪಡಿಸಿದ್ದ ಮಾಸಿಕ ಕೆಡಿಪಿ ಸಭೆಗೆ ಕೇವಲ ಇಬ್ಬರು ಅಧಿಕಾರಿಗಳು ಮಾತ್ರ ಹಾಜರಾದ ಹಿನ್ನೆಲೆ, ಜಿಪಂ ಮುಖ್ಯ ಯೋಜನಾಧಿಕಾರಿ ಹಾಗೂ ಶಿರಹಟ್ಟಿ ತಾಲ್ಲೂಕು ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಗೈರು ಹಾಜರಾದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಿಇಓಗೆ ವರದಿ ಸಲ್ಲಿಸುವದಾಗಿ ಎಚ್ಚರಿಸಿದರು.

ಮಂಗಳವಾರ ತಾಲ್ಲೂಕು ಪಂಚಾಯತ್ ಸಭಾಭವನದಲ್ಲಿ ನಡೆದ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಭೆಯ ಕುರಿತು ಮುಂಚಿತವಾಗಿಯೇ ನೋಟಿಸ್ ನೀಡಿದರೂ ಅಧಿಕಾರಿಗಳು ಪದೇ ಪದೇ ಗೈರು ಉಳಿಯುತ್ತಿರುವುದು ಅಕ್ಷಮ್ಯ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ವಿವಿಧ ಇಲಾಖೆಗಳ ಕಚೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ




ನಡೆಸಲಾಗುವುದು ಎಂದು ಎಚ್ಚರಿಸಿದರು.

ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಲ್ಲಿ 15ನೇ ಹಣಕಾಸು ಯೋಜನೆಯಡಿ ಲಕ್ಷಾಂತರ ರೂಪಾಯಿ ಅನುದಾನ ಅನುಮೋದನೆಗೊಂಡಿದ್ದರೂ, ಅದರ ಬಳಕೆ ವಿಳಂಬವಾಗಿರುವುದಕ್ಕೆ ಅವರು ಅಸಮಾಧಾನ ವ್ಯಕ್ತಪಡಿಸಿದರು.

ಬನ್ನಿಕೊಪ್ಪ, ಬೆಳ್ಳಟ್ಟಿ, ಛಬ್ಬಿ, ಹೆಬ್ಬಾಳ, ಇಟಗಿ, ಕಡಕೋಳ, ಕೋಗನೂರ, ಕೊಂಚಿಗೇರಿ, ಮಾಚೇನಹಳ್ಳಿ, ಮಾಗಡಿ, ಮಜ್ಜೂರ, ರಣತೂರ, ತಾರೀಕೊಪ್ಪ ಹಾಗೂ ವಡವಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಮಂಜೂರಾಗಿದ್ದರೂ ಸಹ ಸರಿಯಾಗಿ ಉಪಯೋಗವಾಗಿಲ್ಲವೆಂದು ತಿಳಿಸಿದರು.

"ಪಂಚಾಯತ್ ಪಾಸ್ ಬುಕ್ ತರಲು ಸೂಚಿಸಿದರೂ ಯಾರೂ ತರದೇ ಇರುವುದು ಏಕೆ? ಹೀಗಾದರೆ ಸಭೆಯಲ್ಲಿ ಏನು ಚರ್ಚೆ ಮಾಡಬೇಕು?" ಎಂದು ಪ್ರಶ್ನಿಸಿದ ಅವರು, ಸರ್ಕಾರದ ಅನುದಾನವನ್ನು ಸದುಪಯೋಗಪಡಿಸಿಕೊಳ್ಳಲು ಅಧಿಕಾರಿಗಳು ಇಚ್ಛಾಶಕ್ತಿ ತೋರಬೇಕು ಎಂದರು. ಮುಂದಿನ ಸಭೆಯನ್ನು ಗದಗದಲ್ಲಿ ಪ್ರತ್ಯೇಕವಾಗಿ ಶಿರಹಟ್ಟಿ ತಾಲೂಕಿಗೆ ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ, ಯೋಜನಾಧಿಕಾರಿ ಎಚ್.ಎ. ಕೊಂಡಿಕೊಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

---

# ಮಹಿಳಾ ಸೇನಾಧಿಕಾರಿಗಳು ಶಾಶ್ವತ ಆಯೋಗಕ್ಕೆ ಅರ್ಹರು: ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಹತ್ವದ ತೀರ್ಪಿನಲ್ಲಿ, ಸುಪ್ರೀಂ ಕೋರ್ಟ್ ಮಂಗಳವಾರ, ಅನಿಯಂತ್ರಿತ ಮೌಲ್ಯಮಾಪನದಿಂದಾಗಿ ಶಾಶ್ವತ ಆಯೋಗವನ್ನು ನಿರಾಕರಿಸಲಾದ ಭೂಸೇನೆ, ನೌಕಾಪಡೆ ಮತ್ತು ವಾಯುಪಡೆಯ ಮಹಿಳಾ ಕಿರು ಸೇವಾ ಆಯೋಗ (ಎಸ್‌ಎಸ್‌ಸಿ) ಅಧಿಕಾರಿಗಳು ಪೂರ್ಣ ಪಿಂಚಣಿ ಸೌಲಭ್ಯಗಳಿಗೆ ಅರ್ಹರು ಎಂದು ತೀರ್ಪು ನೀಡಿದೆ.

ನ್ಯಾಯ ಒದಗಿಸಲು ಅದರ ಅಸಾಧಾರಣ ಅಧಿಕಾರವನ್ನು ಬಳಸಿಕೊಂಡ ಸುಪ್ರೀಂ ಕೋರ್ಟ್ ವ್ಯವಸ್ಥಿತ ತಾರತಮ್ಯದಿಂದಾಗಿ ಮಹಿಳಾ ಅಧಿಕಾರಿಗಳಿಗೆ ಶಾಶ್ವತ ಆಯೋಗ ನಿರಾಕರಣೆ ಮಾಡುತ್ತಾ ಬರಲಾಗಿದೆ ಎಂದು ಕರೆದು, ಮಹಿಳಾ ಅಧಿಕಾರಿಗಳನ್ನು ಅನಿಯಂತ್ರಿತ ಮಿತಿಗಳು ಮತ್ತು ಅನ್ಯಾಯದ ಮೌಲ್ಯಮಾಪನ ಪ್ರಕ್ರಿಯೆಗಳು ಸೇರಿದಂತೆ ದೋಷಪೂರಿತ ಮತ್ತು ತಾರತಮ್ಯದ ಮೌಲ್ಯಮಾಪನ ಚೌಕಟ್ಟಿಗೆ ಒಳಪಡಿಸಲಾಗಿದೆ ಎಂದು ಹೇಳಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಉಜ್ಜಲ್ ಭೂಯಾನ್ ಮತ್ತು ಎನ್. ಕೋಟಿಶ್ವರ್ ಸಿಂಗ್ ಅವರನ್ನೊಳಗೊಂಡ ಪೀಠವು, ಅಧಿಕಾರಿಗಳು ಪಿಂಚಣಿಗೆ ಅಗತ್ಯವಿರುವ ಕನಿಷ್ಠ ಅರ್ಹತಾ ಸೇವೆಯಾದ 20 ವರ್ಷಗಳನ್ನು ಪೂರ್ಣಗೊಳಿಸಿದ್ದಾರೆ ಎಂದು "ಪರಿಗಣಿಸಲಾಗುತ್ತದೆ" ಎಂದು ಅಭಿಪ್ರಾಯಪಟ್ಟಿದೆ, ಅವರು ಮೊದಲೇ ಸೇವೆಯಿಂದ ಬಿಡುಗಡೆಗೊಂಡಿದ್ದರೂ ಸಹ. 2019 ರಲ್ಲಿನ ನೀತಿ ಬದಲಾವಣೆಗಳು ಮತ್ತು ಹಿಂದಿನ ಸಶಸ್ತ್ರ ಪಡೆಗಳ ನ್ಯಾಯಮಂಡಳಿ (ಎಎಫ್‌ಟಿ) ತೀರ್ಪುಗಳ ಆಧಾರದ ಮೇಲೆ ಶಾಶ್ವತ ಆಯೋಗ (ಪಿಸಿ) ನಿರಾಕರಣೆಯನ್ನು ಪ್ರಶ್ನಿಸಿ ವಿಂಗ್ ಕಮಾಂಡರ್ ಸುಚೇತಾ ಎಡಾನ್ ಮತ್ತು ಇತರರು ಸಲ್ಲಿಸಿದ ಅರ್ಜಿಗಳು ಸೇರಿದಂತೆ ಹಲವಾರು ಅರ್ಜಿಗಳ ವಿಚಾರಣೆಯ ಮೇರೆಗೆ ಈ ತೀರ್ಪು ಬಂದಿದೆ.

▶▶ ಮೊದಲನೇ ಪುಟದಿಂದ

## ಕ್ಷಯರೋಗ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸೋಣ: ಡಾ. ಎಸ್.ಎಸ್. ನೀಲಗುಂದ

ಕ್ಷಯರೋಗವನ್ನು ಆರಂಭದಲ್ಲೇ ಪತ್ತೆಹಚ್ಚಿ, ಸರಿಯಾದ ಮತ್ತು ನಿರಂತರ ಚಿಕಿತ್ಸೆ ನೀಡಿದಲ್ಲಿ ಸಂಪೂರ್ಣ ಗುಣಪಡಿಸಬಹುದಾಗಿದೆ. ಆದ್ದರಿಂದ ಸಾರ್ವಜನಿಕರು ಆರೋಗ್ಯದ ಬಗ್ಗೆ ಎಚ್ಚರಿಕೆ ವಹಿಸಿ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಅಗತ್ಯವೆಂದು ಅವರು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯ ಶಿವಕುಮಾರ ಕಾತರಕಿ ಮಾತನಾಡಿ, ಕ್ಷಯರೋಗ ನಿರ್ಮೂಲನೆಗೆ ಆರೋಗ್ಯ ಇಲಾಖೆಯ ಜೊತೆಗೆ ಸಮಾಜದ ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಜನರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಮುಖ್ಯ ಎಂದು ಹೇಳಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ 2025ರಲ್ಲಿ ಸಾಧಿಸಿದ ಪ್ರಗತಿಯ ವಿವರಗಳನ್ನು ಹಂಚಿಕೊಂಡರು. ಪ್ರತಿ ಕ್ಷಯರೋಗ ಘಟಕದಿಂದ ಎರಡು ಗ್ರಾಮ ಪಂಚಾಯತಿಗಳನ್ನು ಆಯ್ಕೆಮಾಡಿ "ಕ್ಷಯ ಮುಕ್ತ ಗ್ರಾಮ" ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ಇದರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿ, ಚುನಾಯಿತ ಪ್ರತಿನಿಧಿಗಳು, ಕೆಎಚ್‌ಪಿಟಿ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನರ್ಸಿಂಗ್ ಕಾಲೇಜಿನ ಸಂಯೋಜಕ ವಿನಯ ಕುಪ್ಪಸದ, ಆರೋಗ್ಯ ಇಲಾಖೆ ಸಿಬ್ಬಂದಿ, ನರ್ಸಿಂಗ್ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕು. ಅನುಷ್ಕಾ ಮತ್ತು ತಂಡ ಪ್ರಾರ್ಥಿಸಿದರು. ಗಣೇಶ ಬಾಗಡೆ ಸ್ವಾಗತಿಸಿದರು. ಅಶ್ವತ್ಥರೆಡ್ಡಿ ಕಾರ್ಯಕ್ರಮ ಸಂಯೋಜನೆ ವಹಿಸಿದ್ದರು. ಎಫ್.ಪಿ. ಮೋದಿನ್ನವರ ಕಾರ್ಯಕ್ರಮ ನಿರೂಪಿಸಿದರು.

### ಆಯವ್ಯಯ ಮಂಡನೆ ವೇಳೆ ಸದಸ್ಯರ ಸಹಕಾರಕ್ಕೆ ಕೃತಜ್ಞತೆ ವ್ಯಕ್ತಪಡಿಸಿದ ಅಧ್ಯಕ್ಷ

# ಅಧ್ಯಕ್ಷ ಮರಿರಾಮಪ್ಪ ಭಾವುಕ ಧನ್ಯವಾದ!

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

"ನಾನು ಪುರಸಭೆ ಅಧ್ಯಕ್ಷನಾದ ನಂತರ ಸುಮಾರು 17 ತಿಂಗಳುಗಳ ಕಾಲ ನನಗೆ ಬೆಂಬಲ ನೀಡಿದ ಸರ್ವ ಸದಸ್ಯರಿಗೆ ಹೃತ್ಪೂರ್ವಕ ಧನ್ಯವಾದಗಳು," ಎಂದು ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪ ಹೇಳಿದರು. ಮುಂದಿನ ದಿನಗಳಲ್ಲಿ ಯಾರೇ ಅಧ್ಯಕ್ಷರಾಗಿದ್ದರೂ ಅವರಿಗೆ ಸಹಕರಿಸೋಣ ಎಂದು ಅವರು ಸದಸ್ಯರಿಗೆ ಮನವಿ ಮಾಡಿದರು.




ಪುರಸಭೆಯ 2026–27ನೇ ಸಾಲಿನ ಆಯವ್ಯಯ ಮಂಡನೆ ವೇಳೆ ಮಾತನಾಡಿದ ಅವರು, ಪ್ರತಿ ವಾರ್ಡ್‌ಗಳಿಗೆ ಅನುದಾನ ಲಭ್ಯವಿದ್ದು, ಸದಸ್ಯರು ತಮ್ಮ ವಾರ್ಡ್‌ಗಳ ಕೆಲಸಗಳ ಪಟ್ಟಿಯನ್ನು ಸಲ್ಲಿಸಲು ವಿನಂತಿಸಿದರು.

ಈ ವರ್ಷ ಪುರಸಭೆ ಆದಾಯವನ್ನು ₹5.30 ಕೋಟಿ ಎಂದು ನಿರೀಕ್ಷಿಸಲಾಗಿದ್ದು, ವೆಚ್ಚವನ್ನು ₹5.50 ಕೋಟಿ ಎಂದು ಅಂದಾಜಿಸಲಾಗಿದೆ. ಪ್ರತಿ ವಾರ್ಡ್‌ನಲ್ಲಿ ವೈಯಕ್ತಿಕ ಹಾಗೂ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಗುರಿ ನಿಗದಿಪಡಿಸಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ನಿಧಿಯಲ್ಲಿ ಶಾಲಾ ಮಕ್ಕಳಿಗೆ ಪುಸ್ತಕಗಳು, ಲ್ಯಾಪ್‌ಟಾಪ್ ಸೇರಿದಂತೆ ವಿವಿಧ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುವ ಯೋಜನೆಗಳನ್ನು ಕೈಗೊಳ್ಳಲಾಗಿದೆ.

ಹಣಕಾಸು ಯೋಜನೆಗಳಲ್ಲಿ ರಸ್ತೆ, ಕಟ್ಟಡಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದ್ದು, ಕುಡಿಯುವ ನೀರು, ಚರಂಡಿ, ಬೀದಿ ದೀಪಗಳು, ಸಿಬ್ಬಂದಿ ವೇತನ, ಕಚೇರಿ ಪೀಠೋಪಕರಣಗಳ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಪುರಸಭೆ ವ್ಯಾಪ್ತಿಯ ಎಲ್ಲಾ ವಾರ್ಡ್‌ಗಳ ಸಮಗ್ರ ಅಭಿವೃದ್ಧಿ ಮುಖ್ಯ ಗುರಿಯಾಗಿದೆಯೆಂದು ಹೇಳಿದರು.

ಸಭೆಯಲ್ಲಿ ಪುರಸಭೆ ಉಪಾಧ್ಯಕ್ಷರು, ಸದಸ್ಯರು, ನಾಮನಿರ್ದೇಶಿತ ಸದಸ್ಯರು, ಮುಖ್ಯಾಧಿಕಾರಿ ಎಂ.ಕೆ. ಮುಗಳಿ, ಸಮುದಾಯ ಅಭಿವೃದ್ಧಿ ಅಧಿಕಾರಿ ಬಸವರಾಜ್, ಕಂದಾಯ ಅಧಿಕಾರಿ ಮಾರೆಪ್ಪ ಸೇರಿದಂತೆ ಸಿಬ್ಬಂದಿ ಹಾಜರಿದ್ದರು.

### ಸಮುದಾಯ ಅಭಿವೃದ್ಧಿ ಅಧಿಕಾರಿಗೆ ತರಾಟೆ

ಸಭೆ ವೇಳೆ 5ನೇ ವಾರ್ಡ್ ಸದಸ್ಯ ಗಣೇಶ್, "ಎಲ್ಲಾ 23 ವಾರ್ಡ್‌ಗಳಲ್ಲಿ ಯಾರಿಗೆ ಎಷ್ಟು ಹೊಲಿಗೆ ಯಂತ್ರಗಳನ್ನು ನೀಡಲಾಗಿದೆ ಎಂಬ ಪಟ್ಟಿ ನೀಡಬೇಕು. ಇದರಲ್ಲಿ ದೊಡ್ಡ ಮಟ್ಟದ ಭ್ರಷ್ಟಾಚಾರ ನಡೆದಿದೆ," ಎಂದು ಆರೋಪಿಸಿದರು. ಅವರ ಮಾತಿಗೆ ಇತರ ಸದಸ್ಯರೂ ಬೆಂಬಲ ಸೂಚಿಸಿದರು. ಇದರಿಂದ ಕೆಲಕಾಲ ಗೊಂದಲ ಉಂಟಾಗಿ, ಸಮುದಾಯ ಅಭಿವೃದ್ಧಿ ಅಧಿಕಾರಿ ಬಸವರಾಜ್ ಉತ್ತರಿಸಲು ಸಂಕೋಚ ವ್ಯಕ್ತಪಡಿಸಿದ ಘಟನೆ ನಡೆಯಿತು.

## ಉಮ್ರಾ ಯಾತ್ರೆಗೆ ತೆರಳಿದ ಭಕ್ತರಿಗೆ ಆತ್ಮೀಯ ಬೀಳ್ಕೊಡುಗೆ!



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪವಿತ್ರ ಉಮ್ರಾ ಯಾತ್ರೆಗೆ ತೆರಳುತ್ತಿರುವ ಭಕ್ತರಿಗೆ ಸ್ಥಳೀಯ ಮಸೀದಿ ಸಮಿತಿ ಹಾಗೂ ಅಲ್ಪಸಂಖ್ಯಾತರ ಮುಖಂಡರು ಭಾನುವಾರ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡುಗೆ ನೀಡಿದರು.

ಈ ಸಂದರ್ಭದಲ್ಲಿ ಮಾನವ ಹಕ್ಕುಗಳ ಸಮಿತಿ ತಾಲೂಕು ಅಧ್ಯಕ್ಷರಾದ ಶಾಬುದ್ದೀನ್ ಮಾತನಾಡಿ, ಧರ್ಮದಲ್ಲಿ ಉಮ್ರಾ ಯಾತ್ರೆ ಅತ್ಯಂತ ಪವಿತ್ರವಾದದ್ದು. ಈ ಯಾತ್ರೆ ವ್ಯಕ್ತಿಯ ಆತ್ಮಶುದ್ಧಿಗೆ ದಾರಿ ತೋರಿಸುವುದರ ಜೊತೆಗೆ ಸಮಾಜದಲ್ಲಿ ಸಹಾನುಭೂತಿ ಮತ್ತು ಸೌಹಾರ್ದತೆಯನ್ನು ಬೆಳೆಸುತ್ತದೆ ಎಂದು ಹೇಳಿದರು.

ಉಮ್ರಾ ಯಾತ್ರೆಗೆ ತೆರಳುತ್ತಿರುವ ಶ್ರೀಮತಿ ರಾಜಮಾಭಿ ತಾಳಿಕೋಟಿ (ಮಾಬುಸಾಬ್, ರಾಮನಗರ, ಹಗರಿಬೊಮ್ಮನಹಳ್ಳಿ) ಅವರಿಗೆ ಈ ಸಂದರ್ಭದಲ್ಲಿ ಅಭಿನಂದನೆ ಸಲ್ಲಿಸಿ, ಸುಖಕರ ಪ್ರಯಾಣವಾಗಲಿ ಹಾಗೂ ಯಾತ್ರೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಸುರಕ್ಷಿತವಾಗಿ ಮರಳಲಿ ಎಂದು ಪ್ರಾರ್ಥಿಸಲಾಯಿತು.

ಕಾರ್ಯಕ್ರಮದಲ್ಲಿ ಮಕಬೂಲ, ಕೆ. ಸಮೀರ್, ಕೆ. ಪರ್ವಿನ್ ಬಾನು, ಕೆ. ಸಿರಿನ್ ಬೇಗಂ, ಕೆ. ಅನಿಫಾ, ಶ್ರೀಮತಿ ಬಾನು ಜಿಲಾನ್, ಹುಸೇನಬಿ ಸೇರಿದಂತೆ ಹಲವರು ಉಪಸ್ಥಿತರಿದ್ದು, ಶುಭ ಹಾರೈಸಿದರು.

### ಸೊನ್ನ ಗ್ರಾಮದಲ್ಲಿ ಕೆರೆ ಅಭಿವೃದ್ಧಿಗೆ ಚಾಲನೆ: ಗ್ರಾಮಸ್ಥರ ಸಹಕಾರಕ್ಕೆ ಸತೀಶ್ ಶೆಟ್ಟಿ ಕರೆ

# "ನಮ್ಮೂರು ನಮ್ಮ ಕೆರೆ" ಕಾರ್ಯಕ್ರಮಕ್ಕೆ ಭೂಮಿ ಪೂಜೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಸೊನ್ನ ಗ್ರಾಮದಲ್ಲಿ "ನಮ್ಮೂರು ನಮ್ಮ ಕೆರೆ" ಯೋಜನೆಯಡಿ ಕೆರೆಯ ಅಭಿವೃದ್ಧಿ ಕಾರ್ಯಕ್ಕೆ ಭೂಮಿ ಪೂಜೆ ಹಾಗೂ ಉದ್ಘಾಟನಾ ಕಾರ್ಯಕ್ರಮ ನೆರವೇರಿತು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಸತೀಶ್ ಶೆಟ್ಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಸತೀಶ್ ಶೆಟ್ಟಿ, ಪರಮಪೂಜ್ಯ ಡಾ. ವೀರೇಂದ್ರ ಹೆಗಡೆ ಹಾಗೂ ಹೇಮಾವತಿ ಹೆಗಡೆಯವರ ಆಶೀರ್ವಾದದಿಂದ ಈ ಯೋಜನೆ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಹೇಳಿದರು. 2016ರ ತೀವ್ರ ಬರಗಾಲದ ಸಂದರ್ಭದಲ್ಲಿ ನೀರಿನ ಅಭಾವವನ್ನು ಗಮನಿಸಿ ಕೆರೆಗಳು ಹಾಗೂ ನದಿಗಳನ್ನು ಉಳಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆರಂಭಿಸಲಾಯಿತು ಎಂದು ವಿವರಿಸಿದರು.

ಸುಮಾರು 9 ವರ್ಷಗಳಲ್ಲಿ 1360ಕ್ಕೂ ಹೆಚ್ಚು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದ್ದು, ರೈತರು, ಪ್ರಾಣಿ-ಪಕ್ಷಿಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ಜೊತೆಗೆ 25,000 ಜನರಿಗೆ ಮಾಸಾಶನ, 70,000 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಹಾಗೂ 11,600 ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸಹಾಯ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಸೊನ್ನ ಗ್ರಾಮದ ಕೆರೆ ಅಭಿವೃದ್ಧಿಗೆ ರೂ. 8 ಲಕ್ಷ ಮಂಜೂರಾಗಿದ್ದು, ಗ್ರಾಮಸ್ಥರು ಸಹಕಾರ ನೀಡುವಂತೆ ಮನವಿ ಮಾಡಿದರು.

ಜನಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ನಟರಾಜ್ ಬಾದಾಮಿ ಮಾತನಾಡಿ, ಜೀವನದಲ್ಲಿ ಕಷ್ಟ-ಸುಖಗಳನ್ನು ಸಮನಾಗಿ ಸ್ವೀಕರಿಸುವುದು ಮುಖ್ಯ ಎಂದು ಹೇಳಿದರು. ಧರ್ಮಸ್ಥಳ ಯೋಜನೆಯಡಿ ಕೆರೆ ಅಭಿವೃದ್ಧಿ ಕಾರ್ಯಗಳು ಜನಸಹಭಾಗಿತ್ವದೊಂದಿಗೆ ನಡೆಯುತ್ತಿದ್ದು, ಇದರಿಂದ ಪರಿಸರ ಹಾಗೂ ಕೃಷಿಗೆ ಹೆಚ್ಚಿನ ಲಾಭವಾಗುತ್ತದೆ ಎಂದರು.

ಆನಂದ್ ದೇವನಹಳ್ಳಿ ಕೊಟ್ರಗೌಡ ಮಾತನಾಡಿ, ಸೊನ್ನ ಗ್ರಾಮದ ಈ ಕೆರೆ ಹಿಂದೆ ಕುಡಿಯುವ ನೀರು ಹಾಗೂ ಪಶುಗಳಿಗೆ ಪ್ರಮುಖ ಆಧಾರವಾಗಿತ್ತು. ಈಗ ಮತ್ತೆ ಅದರ ಪುನರ್ ಅಭಿವೃದ್ಧಿ ನಡೆಯುತ್ತಿರುವುದು ಸಂತಸದ ವಿಷಯ ಎಂದರು. ಗ್ರಾಮಸ್ಥರು ಈ ಯೋಜನೆಗೆ ಪೂರ್ಣ ಸಹಕಾರ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಭಾಧ್ಯಕ್ಷ ನಿಂಗಪ್ಪ ಬಿ.ಎಂ, ಗುರುವಯ್ಯ, ಮರುಳಯ್ಯ ಸ್ವಾಮಿಗಳು, ಕುರುಬ ಸಂಘದ ತಾಲೂಕ ಅಧ್ಯಕ್ಷ ಎಂ. ಶಿವರಾಜ್, ಗ್ರಾಮ ಪಂಚಾಯತಿ ಕಾರ್ಯದರ್ಶಿ ನಾಗರಾಜ್, ಮಾಜಿ ತಾಲೂಕ ಪಂಚಾಯಿತಿ ಸದಸ್ಯ ಪ್ರಭಾಕರ್ ಸೇರಿದಂತೆ ಗ್ರಾಮ ಪಂಚಾಯತಿ ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ದಾಸಿಮಯ್ಯ ವಚನಗಳ ಮೂಲಕ ಸಮಾಜ ಸುಧಾರಣೆಯನ್ನು ಬಯಸಿದ ವಚನಕಾರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೇಡರ ದಾಸಿಮಯ್ಯ ತನ್ನ ವಚನಗಳ ಮೂಲಕ ಸಮಾಜ ಸುಧಾರಣೆಯನ್ನು ಬಯಸಿದ ವಚನಕಾರ. ಅವರ ವಚನಗಳಲ್ಲಿ ಜೀವನದ ಸತ್ವ ಮತ್ತು ಬೆಳಕು ಅಡಗಿವೆ ಎಂದು ಕೆಜಿಎಂಎಸ್ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕ ಬಿ. ಬಿ. ಕುರಿ ಹೇಳಿದರು.




ಶಾಲೆಯಲ್ಲಿ ಆಚರಿಸಲಾದ ಜೇಡರ ದಾಸಿಮಯ್ಯ ಜಯಂತಿಯಲ್ಲಿ ಮಾತನಾಡಿದ ಅವರು, ನೇಕಾರಿಕೆ ಉದ್ಯೋಗದೊಂದಿಗೆ ಕಾಯಕವನ್ನೇ ತನ್ನ ಜೀವನದ ಉಸಿರು ಮಾಡಿಕೊಂಡಿದ್ದ ದಾಸಿಮಯ್ಯ ಅಂದಿನ ದಿನದ ಶ್ರೇಷ್ಠ ವಚನಕಾರನಾಗಿದ್ದ. ರಾಮನಾಥ ಎಂಬ ಅಂಕಿತದೊಂದಿಗೆ 175ಕ್ಕೂ ಹೆಚ್ಚಿನ ವಚನಗಳನ್ನು ರಚಿಸಿದ್ದ ದಾಸಿಮಯ್ಯ ಭಕ್ತಿಯ ಪರಾಕಾಷ್ಠೆಯನ್ನು ತನ್ನ ವಚನಗಳಲ್ಲಿ ಸಾರಿ ಹೇಳಿದ್ದಾನೆ ಎಂದರು.

ಯಾದಗಿರಿ ಜಿಲ್ಲೆಯ ಮುದನೂರು ಗ್ರಾಮದ ಈ ಶ್ರೇಷ್ಠ ವಚನಕಾರ ಹೇಳಿದ ಸಂದೇಶವನ್ನು ನಾವುಗಳು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರಯತ್ನಿಸಬೇಕು. ಅಂದಾಗ ಈ ಶರಣರಿಗೆ ನಾವು ನಿಜವಾದ ಗೌರವವನ್ನು ಸಲ್ಲಿಸಿದಂತಾಗುತ್ತದೆ. ಯಾವುದನ್ನೂ ಪ್ರಶ್ನಿಸದೆ ಒಪ್ಪಿಕೊಂಡ ಜಾಯಮಾನ ದಾಸಿಮಯ್ಯನವರದ್ದಲ್ಲ. ಹೀಗಾಗಿ ಅವರ ವಚನಗಳು ಪ್ರಖರತೆಯಿಂದ ಕೂಡಿರುವುದನ್ನು ಕಾಣುತ್ತೇವೆ.

ತಮ್ಮೂರಿನ ಶ್ರೀ ರಾಮಲಿಂಗೇಶ್ವರನ ಪರಮ ಭಕ್ತರಾಗಿದ್ದ ದಾಸಿಮಯ್ಯ ತಮ್ಮ ಅಂಕಿತವನ್ನು ರಾಮನಾಥ ನೆಂದಿರಿಸಿಕೊಳ್ಳಲು ಇದೂ ಒಂದು ಕಾರಣವಾಗಿರಬಹುದೆಂದು ಕುರಿ ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯವರು ಪಾಲ್ಗೊಂಡಿದ್ದರು.

## ಭಕ್ತ ಸಾಗರದಲ್ಲಿ ಗೋಪುರ ಕಳಸ ಮೆರವಣಿಗೆ!



■ ವಿಜಯಸಾಕ್ಷಿ ಸುದ್ದಿ, ಗದಗ

ಭಕ್ತಿ, ಭವ್ಯತೆ ಮತ್ತು ಸಂಪ್ರದಾಯಗಳ ಸಮ್ಮಿಲನವಾಗಿ ತಳಗೇರಿ ಓಣಿಯ ಶ್ರೀ ವಿಜಯ ದುರ್ಗಾದೇವಿ ದೇವಸ್ಥಾನದ ಗೋಪುರ ಲೋಕಾರ್ಪಣೆ ಅಂಗವಾಗಿ ಕಳಸ ಮೆರವಣಿಗೆ ಅದ್ದೂರಿಯಾಗಿ ಜರುಗಿತು.

ಯೂತ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮೆರವಣಿಗೆಗೆ ಚಾಲನೆ ನೀಡಿದರು. ಒಂದೇ ತರದ ಸೀರೆ ತೊಟ್ಟ ನೂರಾರು ಮಹಿಳೆಯರು, ಕಲಾತಂಡಗಳ ವಾದ್ಯಗಳು ಹಾಗೂ ಕುಂಬಮೇಳದ ಸಂಭ್ರಮದ ನಡುವೆ ಮೆರವಣಿಗೆ ನಗರದಲ್ಲಿ ಅದ್ದೂರಿಯಾಗಿ ನೆರವೇರಿತು.

ದತ್ತಾತ್ರೇಯ ರಸ್ತೆಯ ಉಡಚಮ್ಮದೇವಿ ದೇವಸ್ಥಾನದಿಂದ ಆರಂಭವಾದ ಮೆರವಣಿಗೆ, ನಾಮಜೋಶಿ ರಸ್ತೆ, ಟಾಂಗಾ-ಕೂಟ್ ಸರ್ಕಲ್, ಮಹೇಂದ್ರಕರ್ ಸರ್ಕಲ್ ಮೂಲಕ ಪಂಚಮೂರ್ತಿ ದೇವಸ್ಥಾನ, ಬಸವೇಶ್ವರ ನಗರ ಆಂಜನೇಯ ಗುಡಿ, ಬಾಬು ಜಗಜವನ್ ರಾಮ ಕಲ್ಯಾಣ ಮಂಟಪ ಮಾರ್ಗವಾಗಿ ವಿಜಯ ದುರ್ಗಾದೇವಿ ದೇವಸ್ಥಾನ ತಲುಪಿತು.

ಮೆರವಣಿಗೆಯ ನಂತರ ದೇವಸ್ಥಾನ ವತಿಯಿಂದ ಅನ್ನಸಂತರ್ಪಣೆ ಜರುಗಿದ್ದು, ಸಾವಿರಾರು ಭಕ್ತರು ಶಿರಾ ಬದನೆಕಾಯಿ, ಅನ್ನ-ಸಾರು ಸೇರಿದಂತೆ ಪ್ರಸಾದವನ್ನು ಸ್ವೀಕರಿಸಿ ಧನ್ಯರಾದರು. ಈ ಕಾರ್ಯಕ್ರಮದಲ್ಲಿ ಅನೇಕ ಗಣ್ಯರು ಹಾಗೂ ಭಕ್ತರು ಭಾಗವಹಿಸಿ ಭಕ್ತಿಭಾವವನ್ನು ಮತ್ತಷ್ಟು ಗಟ್ಟಿಗೊಳಿಸಿದರು.

## ಸನ್ಮಾನ ಸಂಘಟನೆಗೆ ಸಲ್ಲಬೇಕು: ರಾಮಚಂದ್ರ ಹುಬ್ಬಳ್ಳಿ ಅಭಿಮತ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ದೇವರ ದಾಸಿಮಯ್ಯನವರ ಜಯಂತಿ ಅಂಗವಾಗಿ ಬೆಟಗೇರಿಯ ಟರ್ನಲ್ ಪೇಟೆ ಹತ್ತಿರ ನಡೆದ ಸಮಾರಂಭದಲ್ಲಿ ಸಾಹಿತಿ ಹಾಗೂ ಶಿಕ್ಷಣ ಇಲಾಖೆ ನಿವೃತ್ತ ವಿಷಯ ಪರಿವೀಕ್ಷಕರಾದ ರಾಮಚಂದ್ರ ಹುಬ್ಬಳ್ಳಿ ಅವರನ್ನು ಸನ್ಮಾನಿಸಲಾಯಿತು.

ಪ್ರತಿ ಹುಣ್ಣಿಮೆಯಂದು ಶ್ರೀ ದೇವರ ದಾಸಿಮಯ್ಯನವರ ವಚನ ವಾಚನ ಕಾರ್ಯಕ್ರಮವನ್ನು ರೂಪಿಸಿ, ಕಳೆದ ಮೂರು ವರ್ಷಗಳಿಂದ ನಿರಂತರವಾಗಿ ಸಮಾಜಕ್ಕೆ ಆಧ್ಯಾತ್ಮಿಕ ಜಾಗೃತಿ ಮೂಡಿಸುತ್ತ ಬಂದಿರುವ ಅವರ ಸೇವೆಯನ್ನು ಪರಿಗಣಿಸಿ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿದ ರಾಮಚಂದ್ರ ಹುಬ್ಬಳ್ಳಿ ಅವರು, ಈ ಕಾರ್ಯಕ್ರಮಕ್ಕೆ ಬೆಂಬಲ ನೀಡಿದ ಸಮಾಜ ಬಾಂಧವರು ಹಾಗೂ ನೇಕಾರ ಸಮುದಾಯದ ಸಹಕಾರವನ್ನು ಸ್ಮರಿಸಿದರು.

ಅವರು ಮಾತನಾಡಿ, "10ನೇ ಶತಮಾನದ ವಚನ ಸಾಹಿತ್ಯಕ್ಕೆ ರೂಪ ನೀಡಿದ ದೇವರ ದಾಸಿಮಯ್ಯನವರ ವಚನಗಳು ಸಮಾಜದ ಆಂಕು-ಡೊಂಕುಗಳನ್ನು ತಿದ್ದುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ" ಎಂದು ಹೇಳಿದರು.

ಪ್ರತಿ ಹುಣ್ಣಿಮೆಗೆ ನಡೆಯುವ ಈ ಕಾರ್ಯಕ್ರಮಕ್ಕೆ ವಚನ ವಾಚನ ಸೇವಾ ಸಮಿತಿ ಸಹಕಾರ ನೀಡುತ್ತಿದೆ. ಈ ಕಾರ್ಯದಲ್ಲಿ ಸೇವೆ ಸಲ್ಲಿಸಿದ ದಿವಂಗತ ಬಸವರಾಜ ಇಂಡಿ ಅವರನ್ನು ಸ್ಮರಿಸಿದ ಅವರು, ಪ್ರಸ್ತುತ ದೊಡ್ಡಪ್ಪ ಮೂಲಿಮನಿ ವಚನ ವಾಚನ ನಡೆಸುತ್ತಿದ್ದಾರೆ ಎಂದರು.

ಶ್ರೀನಿವಾಸ ಹುಬ್ಬಳ್ಳಿ, ದಶರಥ ಕೊಳ್ಳಿ, ಅನಿಲ ಗಡ್ಡಿ, ಅಶೋಕ್ ಬಣ್ಣದ, ರಾಘವೇಂದ್ರ ಯಳವತ್ತಿ, ಸಂಕಣ್ಣ ಗಂಜಿ, ಬಸುರಾಜ ಮುದುಗಲ್ ಸೇರಿದಂತೆ ಅನೇಕರು ಈ ಕಾರ್ಯದಲ್ಲಿ ಸಲ್ಲಿಸಿರುವ ಸೇವೆ ಅಮೂಲ್ಯವಾಗಿದೆ ಎಂದು ಅವರು ತಿಳಿಸಿದರು.

## ನಿಧನ

### ಪಾರ್ವತಿಬಾಯಿ ಖಟವಟೆ



ಗದಗ: ನಗರದ ಹುಬ್ಬಳ್ಳಿ ರಸ್ತೆ, ಕೇಶವ ನಗರ ನಿವಾಸಿ ಎಸ್.ಎಸ್.ಕೆ ಸಮಾಜದ ಹಿರಿಯರಾದ ಶ್ರೀಮತಿ ಪಾರ್ವತಿಬಾಯಿ ಶಂಕರಸಾ ಖಟವಟೆ (64) ಅವರು ಮಂಗಳವಾರ (ಮಾ. 24) ಬೆಳಗಿನ ಜಾವ 1 ಗಂಟೆಗೆ ನಿಧನರಾದರು.

ಮೃತರ ಅಂತ್ಯಕ್ರಿಯೆ ಮಂಗಳವಾರ ಸಂಜೆ 4:30 ಗಂಟೆಗೆ ನೆರವೇರಿತು.

ಮೃತರು ಪತಿ ಮನೋಜ ಜ್ಯುವೆಲರ್ಸ್ ಮಾಲೀಕರಾದ ಶಂಕರಸಾ ಖಟವಟೆ ಸೇರಿದಂತೆ ಮೂವರು ಪುತ್ರರು, ಒಬ್ಬ ಪುತ್ರಿ, ಸೊಸೆಯಂದಿರು, ಮೊಮ್ಮಕ್ಕಳು, ಅಳಿಯಂದಿರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಸಂತಾಪ: ಪಾರ್ವತಿಬಾಯಿ ಶಂಕರಸಾ ಖಟವಟೆ ಅವರ ನಿಧನಕ್ಕೆ ಗದಗ ಎಸ್.ಎಸ್.ಕೆ ಸಮಾಜ ಪಂಚ ಟ್ರಸ್ಟ್ ಕಮೀಟಿ, ತರುಣ ಸಂಘ ಹಾಗೂ ಸಮಾಜ ಬಾಂಧವರು ಸಂತಾಪ ಸೂಚಿಸಿದ್ದಾರೆ.

## ನಿಧನ

### ಪಾರ್ವತೆವ್ವ ಇಟಗಿ



ಗದಗ: ರಾಜೀವ್‌ಗಾಂಧಿ ನಗರದಲ್ಲಿರುವ ಶಿಕ್ಷಕರ ಬಡಾವಣೆಯ ನಿವಾಸಿ ಶತಾಯುಷಿ ಶ್ರೀಮತಿ ಪಾರ್ವತೆವ್ವ ಮಹಾದೇವಪ್ಪ ಇಟಗಿ (ಸಾ. ಕೋಟುಮಚಗಿ) (105) ಮಂಗಳವಾರ ತಮ್ಮ ನಿವಾಸದಲ್ಲಿ ನಿಧನರಾದರು.

ಅವರ ಅಂತಿಮ ಯಾತ್ರೆ 25-03-2026 ಬುಧವಾರ ಮುಂಜಾನೆ 11 ಗಂಟೆಗೆ ಸ್ವಗೃಹದಿಂದ ಪ್ರಾರಂಭವಾಗಲಿದೆ.

ಮೃತರಿಗೆ ಮೂರು ಪುತ್ರಿಯರು, ಒರ್ವ ಪುತ್ರ, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವಿದೆ.

▶▶ಮೊದಲನೇ ಪುಟದಿಂದ

## ಚಿಕ್ಕವಡ್ಡಟ್ಟಿಯಲ್ಲಿ ಗುಂಪು ಘರ್ಷಣೆ..!



ಇನ್ನೂ ಗದಗ ಜಿಮ್ಸ್ ಆಸ್ಪತ್ರೆಯಲ್ಲಿ ಎಸ್ಸಿ ಸಮುದಾಯದ 24 ಜನರು ಚಿಕಿತ್ಸೆ ಪಡೆಯುತ್ತಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಗಾಯಾಳುಗಳ ನರಳಾಟ ಆಸ್ಪತ್ರೆಗೆ ಭೇಟಿ ನೀಡಿದವರ ಮನಸ್ಸು ಮಿಡಿಯುವಂತೆ ಮಾಡುತ್ತಿದೆ.

ಘಟನೆ ಬಗ್ಗೆ ಮಾಹಿತಿ ಪಡೆದ ಗದಗ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಕ್ಷಣ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು. ಜೊತೆಗೆ ಘಟನೆಯ ಕುರಿತು ಸಮಾಜ ಕಲ್ಯಾಣ ಇಲಾಖೆಗೆ ಸವಿಸ್ತಾರ ವರದಿ ಸಲ್ಲಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಡಳಿತವೂ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಸಂಪೂರ್ಣ ವರದಿ ಕೇಳಿದೆ.

ಘಟನೆ ಬಳಿಕ ಚಿಕ್ಕವಡ್ಡಟ್ಟಿ ಗ್ರಾಮದಲ್ಲಿ ಬೂದಿ ಮುಚ್ಚಿದ ಕೆಂಡದಂತಿರುವ ಉದ್ವಿಗ್ನ ವಾತಾವರಣ ಮುಂದುವರೆದಿದೆ. ಯಾವುದೇ ಅನಾಹುತ ಸಂಭವಿಸದಂತೆ ಡಿವೈಎಸ್ಪಿ ನೇತೃತ್ವದಲ್ಲಿ ಪೊಲೀಸ್ ಪಡೆಗಳನ್ನು ನಿಯೋಜಿಸಿ ಕಟ್ಟುನಿಟ್ಟಿನ ಬಂದೋಬಸ್ತ್ ಕೈಗೊಳ್ಳಲಾಗಿದೆ. ಗ್ರಾಮದಲ್ಲಿ ಪೊಲೀಸರು ಸತತ ಗಸ್ತು ತಿರುಗುತ್ತಿದ್ದು, ಪರಿಸ್ಥಿತಿಯನ್ನು ನಿಯಂತ್ರಣದಲ್ಲಿ ಇಡಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಮುಂಡರಗಿ ಪೊಲೀಸ್ ಠಾಣೆಯಲ್ಲಿ ಎರಡೂ ಸಮುದಾಯಗಳಿಂದ ದೂರು ದಾಖಲಾಗಿದ್ದು, ಪ್ರಕರಣ ಸಂಬಂಧ 21 ಜನರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಬಂಧನ ಭೀತಿಯಿಂದ ಕೆಲ ಯುವಕರು ಗ್ರಾಮ ತೊರೆದು ಹೋಗಿರುವುದಾಗಿ ಸ್ಥಳೀಯರು ತಿಳಿಸಿದ್ದಾರೆ. ಪೊಲೀಸರು ಇನ್ನೂ ಕೆಲ ಶಂಕಿತರಿಗಾಗಿ ಶೋಧ ಕಾರ್ಯ ಮುಂದುವರೆಸಿದ್ದಾರೆ.

### 3 ವರ್ಷ ಡಯಾಲಿಸಿಸ್ ನರಕಕ್ಕೆ ಬ್ರೇಕ್ ನೀಡಿದ ಡಾ.ಎಚ್.ಕೆ. ಪಾಟೀಲ ಸೇವಾ ತಂಡ!

# ಸೇವಾ ತಂಡದಿಂದ ಆಟೋ ಚಾಲಕನಿಗೆ 'ಮರುಜನ್ಮ'!

■ವಿಜಯಸಾಕ್ಷಿ ಸುದ್ದಿ, ಗದಗ

ಜೀವನದೊಂದಿಗೆ ಹೋರಾಟ ನಡೆಸುತ್ತಿದ್ದ ಬಡ ಆಟೋ ಚಾಲಕನಿಗೆ ಇದೀಗ ಹೊಸ ಬದುಕು ದೊರೆತಿದೆ. ಸಚಿವ ಡಾ. ಎಚ್.ಕೆ. ಪಾಟೀಲ್ ಸೇವಾ ತಂಡದ ನೆರವಿನಿಂದ ಗದಗದ 47 ವರ್ಷದ ಫಿರೋಜ್ ಖಾನ್ ಹೊಸಪೇಟೆಗೆ ಉಚಿತ ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿದೆ.

ಎರಡು ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿದ್ದ ಫಿರೋಜ್ ಕಳೆದ ಮೂರು ವರ್ಷಗಳಿಂದ ಡಯಾಲಿಸಿಸ್‌ಗೆ ಒಳಗಾಗುತ್ತಿದ್ದರು. ಚಿಕಿತ್ಸೆಗಾಗಿ ಹುಬ್ಬಳ್ಳಿ ಮತ್ತು ಬೆಂಗಳೂರಿನಲ್ಲಿ ವಿಚಾರಿಸಿದಾಗ 7ರಿಂದ 8 ಲಕ್ಷ ರೂ. ವೆಚ್ಚ ಬೇಕೆಂದು ತಿಳಿದು ಫಿರೋಜ್ ಸಂಪೂರ್ಣ ನಿರಾಶರಾದರು. ಆದರೆ ಡಾ. ಎಚ್.ಕೆ. ಪಾಟೀಲ್ ಸೇವಾ ತಂಡವನ್ನು ಸಂಪರ್ಕಿಸಿದ ಬಳಿಕ ಅವರ ಬದುಕಿನ ದಿಕ್ಕೇ ಬದಲಾಗಿದೆ.

ತಂಡವು ಅವರ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಅವರ ಪತ್ನಿ ರೇಷ್ಮಾ ಅವರೇ ಮೂತ್ರಪಿಂಡ ದಾನ ಮಾಡಲು ಮುಂದೆ ಬಂದರು. ಇದೀಗ ಶಸ್ತ್ರಚಿಕಿತ್ಸೆಯಾಗಿ ಒಂದು ವಾರ ಕಳೆದಿದ್ದು, ದಾನಿ ಮತ್ತು ಸ್ವೀಕರಿಸಿರುವ ಇಬ್ಬರೂ ಆರೋಗ್ಯವಾಗಿದ್ದಾರೆ. ಸಚಿವ ಎಚ್.ಕೆ. ಪಾಟೀಲ್ ಅವರ ತಂದೆ ದಿವಂಗತ ಕೆ.ಎಚ್. ಪಾಟೀಲ್ ಅವರ 101ನೇ ಜನ್ಮ ದಿನದ ಅಂಗವಾಗಿ



ವರ್ಷಕ್ಕೆ 12 ಉಚಿತ ಮೂತ್ರಪಿಂಡ ಕಸಿ ಮತ್ತು 100 ನೀ ರಿಪ್ಲೇಸ್‌ಮೆಂಟ್ ಶಸ್ತ್ರಚಿಕಿತ್ಸೆ ಮಾಡುವ ಘೋಷಣೆಯ ಭಾಗವಾಗಿ ಇದು ಮೊದಲ ಸಾಧನೆಯಾಗಿದೆ.

ಸೇವಾ ತಂಡದ ಅಧ್ಯಕ್ಷ ಪ್ರಭು ಬುರಬುರೆ ಅವರ ನೇತೃತ್ವದಲ್ಲಿ ಗದಗ ಜಿಲ್ಲೆಯಲ್ಲಿ ಈಗಾಗಲೇ 577 ಕಾರ್ಯಕರ್ತರು ಕಾರ್ಯನಿರ್ವಹಿಸುತ್ತಿದ್ದು, ಈ ಸಂಖ್ಯೆಯನ್ನು 1000ಕ್ಕೆ ಹೆಚ್ಚಿಸುವ ಗುರಿ ಹೊಂದಲಾಗಿದೆ.

ವಾರ್ಡ್ 28ರ ಸಂಯೋಜಕ ಆನಂದ್ ಕೊರ್ಲಹಳ್ಳಿ ಈ ಸೇವೆಯಲ್ಲಿ ಪ್ರಮುಖ ಪಾತ್ರ

> "ಮೂರು ವರ್ಷಗಳ ನೋವು, ನಿರಾಶೆಯ ಮಧ್ಯೆ ನಾವು ಬದುಕಿನ ಆಶೆಯನ್ನೇ ಕಳೆದುಕೊಂಡಿದ್ದೇವೆ. ಆದರೆ ಸೇವಾ ತಂಡದ ನೆರವು ನಮಗೆ ಹೊಸ ಜೀವ ಕೊಟ್ಟಿದೆ. ನನ್ನ ಪತ್ನಿಯ ತ್ಯಾಗ ನನ್ನ ಜೀವನವನ್ನೇ ಉಳಿಸಿದೆ ಇದು ನಮ್ಮ ಕುಟುಂಬಕ್ಕೆ ಪುನರ್ಜನ್ಮದಂತಾಗಿದೆ."
>
> **–ಫಿರೋಜ್ ಹೊಸಪೇಟೆ, ಚಿಕಿತ್ಸೆ ಪಡೆದಾತ.**

ವಹಿಸಿದ್ದು, ವೈದ್ಯರ ತಂಡದ ಸಹಕಾರದಿಂದ ಈ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದೆ. ಈ ಘಟನೆಯ ಮೂಲಕ ಅಂಗಾಂಗ ದಾನದ ಮಹತ್ವ ಮತ್ತೊಮ್ಮೆ ಎತ್ತಿ ಹಿಡಿಯಲಾಗಿದೆ. ಫಿರೋಜ್ ಅವರ ಪತ್ನಿಯ ತ್ಯಾಗ ಎಲ್ಲರಿಗೂ ಮಾದರಿಯಾಗಿದೆ.



### ಆಶ್ರಯವಿಲ್ಲದ ಮಹಿಳೆಗೆ ರೂ.1.35 ಲಕ್ಷ ವೆಚ್ಚದಲ್ಲಿ ಮನೆ ನಿರ್ಮಾಣ

# ನಿರ್ಗತಿಕ ಲಲಿತಮ್ಮಗೆ ಧರ್ಮಸ್ಥಳದಿಂದ ವಾತ್ಸಲ್ಯ ಮನೆ!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಮೋರಗೇರಿ ಗ್ರಾಮದಲ್ಲಿ ಆಶ್ರಯವಿಲ್ಲದೆ ಅಸಹಾಯಕ ಸ್ಥಿತಿಯಲ್ಲಿ ಜೀವನ ನಡೆಸುತ್ತಿದ್ದ ಲಲಿತಮ್ಮ ಅವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ವಾತ್ಸಲ್ಯ ಮನೆ ನಿರ್ಮಿಸಿ ಹಸ್ತಾಂತರಿಸಲಾಗಿದೆ.

ಜಿಲ್ಲಾ ನಿರ್ದೇಶಕರಾದ ಸತೀಶ್ ಶೆಟ್ಟಿ ಮಾತನಾಡಿ, ಶ್ರೀ ಮಂಜುನಾಥ ಸ್ವಾಮಿ ಹಾಗೂ ಡಾ. ವೀರೇಂದ್ರ ಹೆಗಡೆ ಮತ್ತು ಡಾ. ಹೇಮಾವತಿ ಹೆಗಡೆ ಅವರ ಆಶೀರ್ವಾದದಿಂದ ವಿಜಯನಗರ ಜಿಲ್ಲೆಯಲ್ಲಿ ಈ ವರ್ಷ 8 ಮನೆಗಳನ್ನು ನಿರ್ಮಿಸಿ ನಿರ್ಗತಿಕರಿಗೆ ನೀಡಲಾಗಿದೆ ಎಂದು ಹೇಳಿದರು. ರಾಜ್ಯಾದ್ಯಂತ ಈಗಾಗಲೇ



560ಕ್ಕೂ ಹೆಚ್ಚು ಮನೆಗಳನ್ನು ನಿರ್ಮಿಸಿ ಹಸ್ತಾಂತರಿಸಿರುವುದಾಗಿ ತಿಳಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ನಾಗರಾಜ್ ಅವರು, ಧರ್ಮಸ್ಥಳ ಸಂಸ್ಥೆ ಸಮಾಜ ಸೇವೆಯಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದು, ಕೆರೆ ಅಭಿವೃದ್ಧಿ, ನಶಾಮುಕ್ತಿ, ಬಡವರಿಗೆ ಸಾಲ ಸೌಲಭ್ಯ ಸೇರಿದಂತೆ ಅನೇಕ ಯೋಜನೆಗಳನ್ನು ಯಶಸ್ವಿಯಾಗಿ ನಡೆಸುತ್ತಿದೆ ಎಂದು ಪ್ರಶಂಸಿಸಿದರು.

ಮಾಜಿ ಅಧ್ಯಕ್ಷ ಉದಯ್ ಕುಮಾರ್ ಮಾತನಾಡಿ, ಇಂದಿನ ದಿನಗಳಲ್ಲಿ ಮನೆ ಕಟ್ಟುವುದು ಕಷ್ಟವಾಗಿರುವ ಸಂದರ್ಭದಲ್ಲಿ ಲಲಿತಮ್ಮಗೆ ರೂ. 1.35 ಲಕ್ಷ ವೆಚ್ಚದಲ್ಲಿ ಮನೆ ನಿರ್ಮಿಸಿ ಕೊಟ್ಟಿರುವುದು ಶ್ಲಾಘನೀಯ ಎಂದು ಹೇಳಿದರು.

ಜನಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ನಟರಾಜ್ ಬಾದಾಮಿ ಅವರು, ದೂರದ ಗ್ರಾಮಗಳಲ್ಲೂ ನಿರ್ಗತಿಕರಿಗೆ ಮಾಸಾಶನ ಹಾಗೂ ಮನೆ ಸೌಲಭ್ಯ ಒದಗಿಸುತ್ತಿರುವುದು ಧರ್ಮಸ್ಥಳ ಸಂಸ್ಥೆಯ ಸಮರ್ಪಣೆಯ ಸಂಕೇತ ಎಂದು ಹೇಳಿದರು.

> "ಭೂಮಿಯ ಮೇಲೆ ಹುಟ್ಟಿದ ಪ್ರತಿಯೊಬ್ಬರಿಗೂ ತಮ್ಮದೇ ಆದ ಗೂಡು ಇರಬೇಕು, ನಿರ್ಗತಿಕರಿಗೆ ಆಶ್ರಯ ಒದಗಿಸುವುದು ನಮ್ಮ ಕರ್ತವ್ಯ"
>
> **– ಸತೀಶ್ ಶೆಟ್ಟಿ**

ಪ್ರಸನ್ನ ಸ್ವಾಮಿಗಳು ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಅಧಿಕಾರಿಗಳು, ಸೇವಾ ಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಅಂಬೇಡ್ಕರ್ ರಸ್ತೆ ನಾಮಫಲಕ ದುರಸ್ತಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೇ ಕೋರ್ಟ್ ಹತ್ತಿರವಿರುವ ಡಾ. ಬಿ.ಆರ್. ಅಂಬೇಡ್ಕರ್ ರಸ್ತೆ ನಾಮಫಲಕವನ್ನು ಅಭಿವೃದ್ಧಿಪಡಿಸುವಂತೆ ಕ್ರಾಂತಿಸೂರ್ಯ ಜೈ ಭೀಮ್ ಸೇನೆ (ರಿ) ಗದಗ ಜಿಲ್ಲಾ ಘಟಕದ ವತಿಯಿಂದ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ಸಂಘಟನೆಯ ಅಧ್ಯಕ್ಷರಾದ ಶಿವಾನಂದ ಸಕ್ರಿ ಮಾತನಾಡಿ, ನಗರದ ಹೃದಯ ಭಾಗದಲ್ಲಿರುವ ಹಳೇ ಕೋರ್ಟ್ ಸಮೀಪ ಹಾಗೂ ಪ್ರಾಚ್ಯ ವಸ್ತುಸಂಗ್ರಹಾಲಯದ ಎದುರಿನ ಅಂಬೇಡ್ಕರ್ ರಸ್ತೆ ನಾಮಫಲಕ ಧೂಳಿನಿಂದ ಕೂಡಿದ್ದು, ದುರಸ್ತಿಯ ಅಗತ್ಯವಿದೆ ಎಂದು ತಿಳಿಸಿದರು. ನಾಮಫಲಕದ ಮೇಲೆ ವಿವಿಧ ಜಾಹೀರಾತುಗಳನ್ನು ಅಂಟಿಸಿರುವುದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಅವಮಾನವಾಗಿದ್ದು, ಅವರ ಅನುಯಾಯಿಗಳಿಗೆ ನೋವುಂಟು ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆದ್ದರಿಂದ, ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವದೊಳಗೆ ನಾಮಫಲಕವನ್ನು ದುರಸ್ತಿ ಮಾಡಿ, ಬಣ್ಣ ಹಚ್ಚಿ, ದೀಪಾಲಂಕಾರಗೊಳಿಸುವ ಜೊತೆಗೆ ಜಾಹೀರಾತು ಅಂಟಿಸದಂತೆ ತಂತಿ ಜಾಲಿ ಅಳವಡಿಸಲು ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಿಷ್ಣು ಹಾದಿಮನಿ, ರಾಘವೇಂದ್ರ ನಾಗನಾಥನಹಳ್ಳಿ, ಸಂಜಯ್ ಪರಾಪುರ, ಸಂಜಯ್ ಮಾದರ, ಅಭಿ ಸಂಗಾಪುರ, ರಾಘವೇಂದ್ರ ಬಳ್ಳಾರಿ, ರಾಹುಲ್ ಬಳ್ಳಾರಿ, ಮನೋಜ್ ಪೂಜಾರ, ರವಿ ಅಗಸನಕೊಪ್ಪ, ಚಿನ್ನು ಮಾದರ, ಅವಿನಾಶ್ ಹರಿಜನ, ಪ್ರಜ್ವಲ್ ಯಟ್ಟಿ, ಗಿರೀಶ್ ಹರಿಜನ, ವಿನಾಯಕ ಬಳ್ಳೂರ ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅನುದಾನ ದುರುಪಯೋಗ ಶಂಕೆ: ನರೇಗಲ್ಲ ರಸ್ತೆ ತನಿಖೆ ಶುರು!




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ರೋಣ ವ್ಯಾಪ್ತಿಯಲ್ಲಿ 2021-22ನೇ ಸಾಲಿನಲ್ಲಿ ಕೈಗೆತ್ತಿಕೊಂಡಿದ್ದ 5054 ಗ್ರಾಮೀಣ ರಸ್ತೆ ಕಾಮಗಾರಿ ಇದೀಗ ಕಳಪೆ ಗುಣಮಟ್ಟದ ಆರೋಪದ ನಡುವೆ ಲೋಕಾಯುಕ್ತದ ಗಮನ ಸೆಳೆದಿದೆ.

ಸುಮಾರು 80 ಲಕ್ಷ ರೂ. ಅನುದಾನದಲ್ಲಿ ನರೇಗಲ್ಲದಿಂದ ತೊಂಡಿಹಾಳದವರೆಗೆ ರಸ್ತೆ ಸುಧಾರಣೆ ಮಾಡಲಾಗಿದ್ದು, ಕಾಮಗಾರಿ ಆರಂಭದಿಂದಲೇ ಗುಣಮಟ್ಟದ ಬಗ್ಗೆ ಸ್ಥಳೀಯರಲ್ಲಿ ಅಸಮಾಧಾನ ವ್ಯಕ್ತವಾಗಿತ್ತು.

ಈ ಹಿನ್ನೆಲೆಯಲ್ಲಿ ನರೇಗಲ್ಲ ನಿವಾಸಿ ಬಸವರಾಜ ಚಂದ್ರಶೇಖರ ಕಳಕೊಣ್ಣವರ ಅವರು ಲೋಕಾಯುಕ್ತಕ್ಕೆ ದೂರು ಸಲ್ಲಿಸಿ, ಕಾಮಗಾರಿ ಮಾನದಂಡಗಳನ್ನು ಉಲ್ಲಂಘಿಸಿ ನಡೆಸಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದರು. ದೂರು ಸ್ವೀಕರಿಸಿದ ಲೋಕಾಯುಕ್ತ ಇಲಾಖೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಸ್ಥಳ ಪರಿಶೀಲನೆ ಆರಂಭಿಸಿದೆ.

ಲೋಕಾಯುಕ್ತದ ಅಭಿಯಂತರ ತೇಜಸ್ ಎಸ್ ನೇತೃತ್ವದಲ್ಲಿ ಸೋಮವಾರ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದ್ದು, ಗುಣಮಟ್ಟ, ಬಳಕೆಯಾದ ವಸ್ತುಗಳು, ತಾಂತ್ರಿಕ ಅಂಶಗಳು ಹಾಗೂ ಖರ್ಚಿನ ದಾಖಲೆಗಳ ಪರಿಶೀಲನೆ ನಡೆಯುತ್ತಿದೆ.

ರಸ್ತೆ ನಿರ್ಮಾಣದ ಕೆಲವೇ ದಿನಗಳಲ್ಲಿ ಹಾಳಾಗಿರುವುದು, ಹಲವೆಡೆ ಗುಂಡಿಗಳು ಉಂಟಾಗಿ ಸಂಚಾರಕ್ಕೆ ಅಡಚಣೆ ಉಂಟಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಮಳೆಗಾಲದಲ್ಲಿ ಸಮಸ್ಯೆ ಇನ್ನಷ್ಟು ಗಂಭೀರವಾಗುವ ಸಾಧ್ಯತೆ ಇರುವುದರಿಂದ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಸಂಬಂಧಿಸಿದ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬ ಬೇಡಿಕೆ ಕೂಡ ಕೇಳಿಬರುತ್ತಿದೆ. ಸಾರ್ವಜನಿಕ ಹಣದ ದುರುಪಯೋಗ ನಡೆದಿದೆಯೇ ಎಂಬುದನ್ನು ಪತ್ತೆಹಚ್ಚುವುದು ತನಿಖೆಯ ಪ್ರಮುಖ ಉದ್ದೇಶವಾಗಿದ್ದು, ಫಲಿತಾಂಶದ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ.

ಗ್ರಾಮೀಣ ಅಭಿವೃದ್ಧಿಗೆ ಮೀಸಲಾದ ಅನುದಾನ ಸರಿಯಾಗಿ ಬಳಸಲಾಗುತ್ತಿದೆಯೇ ಎಂಬ ಪ್ರಶ್ನೆಗೆ ಈ ತನಿಖೆ ಉತ್ತರ ನೀಡಲಿದ್ದು, ಕಳಪೆ ಕಾಮಗಾರಿಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿ ಪರಿಣಮಿಸಲಿದೆ.

# ನಾಳೆ ಗದಗದಲ್ಲಿ ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ಮಾರ್ಚ್ 26 ರಂದು ಬೆಳಗ್ಗೆ 10 ಗಂಟೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

ನಗರದ ವಿವೇಕಾನಂದ ನಗರ 4ನೇ ಅಡ್ಡ ರಸ್ತೆ, ಸಾಯಿ ಬಾಬಾ ದೇವಸ್ಥಾನದ ಹಿಂಭಾಗದಲ್ಲಿರುವ ಕೆ.ಎಚ್.ಬಿ ಕಾಲೋನಿಯಲ್ಲಿ ಈ ಸಂದರ್ಶನ ನಡೆಯಲಿದೆ.

ಈ ನೇರ ಸಂದರ್ಶನದಲ್ಲಿ ಸ್ವತಂತ್ರ ಮೈಕ್ರೋಫಿನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ಭಾಗವಹಿಸಲಿದ್ದು, ಫೀಲ್ಡ್ ವರ್ಕ್ (SEO) ಹುದ್ದೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ ಹೊಂದಿದ 18 ರಿಂದ 30 ವರ್ಷ ವಯಸ್ಸಿನ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಶಿರಹಟ್ಟಿ, ಮುಂಡರಗಿ, ಗದಗ ಹಾಗೂ ಅಣ್ಣಿಗೇರಿ ಪ್ರದೇಶಗಳಲ್ಲಿ ಕೆಲಸ ನೀಡಲಾಗುತ್ತದೆ. ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತಾ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, ಎರಡು ರೆಸ್ಯೂಮೆ (ಬಯೋಡಾಟಾ) ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಝೆರಾಕ್ಸ್ ಕಡ್ಡಾಯವಾಗಿ ತರಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸುವವರಿಗೆ ಅದೇ ದಿನ ನೋಂದಣಿ ಕಡ್ಡಾಯವಾಗಿರುತ್ತದೆ.

ಯುವನಿಧಿ ಯೋಜನೆಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕೆಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 8951460061, 6363330688 ಹಾಗೂ 7022606050 ಸಂಖ್ಯೆಗೆ ಸಂಪರ್ಕಿಸಬಹುದು.

## ನಿಧನ

### ಹುಸೇನಬಿ ಹೊಸಪೇಟೆ



ಡಂಬಳ: ಗ್ರಾಮದ ಮುಸ್ಲಿಂ ಸಮಾಜದ ಹಿರಿಯರಾದ ಶ್ರೀಮತಿ ಹುಸೇನಬಿ ಅಲ್ಲಾವುದ್ದಿನಸಾಬ ಹೊಸಪೇಟೆ (85) ಅವರು ಮಂಗಳವಾರ ನಿಧನರಾದರು.

ಅವರಿಗೆ ಮೂವರು ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು, ಮರಿಮೊಮ್ಮಕ್ಕಳು, ಸೊಸೆಯಂದಿರು, ಅಳಿಯಂದಿರು ಹಾಗೂ ಅಪಾರ ಬಂಧು-ಬಳಗವಿದೆ.

### ಹೆಸ್ಕಾಂ-ನಗರಸಭೆ ನಿರ್ಲಕ್ಷ್ಯದ ವಿರುದ್ಧ ದಲಿತ ಮಿತ್ರ ಮೇಳದ ಕಾರ್ಯಕರ್ತರ ಆಕ್ರೋಶ

# ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ಗೆ ಗೋವುಗಳ ಸಾವು!

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತಿಲಕ್ ಪಾರ್ಕ್ ಸಮೀಪ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಗೋವುಗಳು ಸಾವನ್ನಪ್ಪಿದ ಘಟನೆಗೆ ತೀವ್ರ ಖಂಡನೆ ವ್ಯಕ್ತಪಡಿಸಿ, ದಲಿತ ಮಿತ್ರ ಮೇಳ ಸಂಘಟನೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಿದೆ.

ಸಂಘಟನೆಯ ಅಧ್ಯಕ್ಷ ಕುಮಾರ ನಡಗೇರಿ ಮಾತನಾಡಿ, ದಿನಾಂಕ 22-03-2026ರ ತಡರಾತ್ರಿ ಸಂಭವಿಸಿದ ಈ ಘಟನೆ ಅತ್ಯಂತ ದುಃಖಕರವಾಗಿದ್ದು, ಗೋಮಾತೆಯ ರಕ್ಷಣೆಗೆ ಬದ್ಧರಾಗಿರುವವರಿಗೆ ಇದು ನೋವಿನ ಸಂಗತಿಯಾಗಿದೆ. ಈ ದುರಂತಕ್ಕೆ ನೇರ ಹೊಣೆಗಾರರು ಹೆಸ್ಕಾಂ ಮತ್ತು ನಗರಸಭೆ ಅಧಿಕಾರಿಗಳೇ ಆಗಿದ್ದು, ವಿದ್ಯುತ್ ಟಿಸಿ ಕಂಬಗಳಿಗೆ ಅಗತ್ಯ ಭದ್ರತೆ ಒದಗಿಸದಿರುವುದು ಹೆಸ್ಕಾಂನ ಬೇಜವಾಬ್ದಾರಿತನವನ್ನು ತೋರಿಸುತ್ತದೆ ಎಂದು ಆರೋಪಿಸಿದರು.



ಇದೇ ಸಂದರ್ಭದಲ್ಲಿ ನಗರದಲ್ಲಿ ಇರುವ ಬಿಡಾಡಿ ದನಗಳನ್ನು ಸ್ಥಳಾಂತರಿಸುವ ಬಗ್ಗೆ ಹಲವು ಸಂಘಟನೆಗಳು ಈ ಹಿಂದೆ ಮನವಿ ಸಲ್ಲಿಸಿದ್ದರೂ, ನಗರಸಭೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. ಸಾರ್ವಜನಿಕರ ಸುರಕ್ಷತೆಗೂ ಈ ರೀತಿಯ ಘಟನೆಗಳು ಭಾರಿ ಅಪಾಯವನ್ನು ಉಂಟುಮಾಡಬಹುದು ಎಂದು ಎಚ್ಚರಿಸಿದರು.

ಸಂಘಟನೆಯ ಉಪಾಧ್ಯಕ್ಷ ವೆಂಕಟೇಶ ದೊಡ್ಡಮನಿ ಅವರು, ಗದಗ ನಗರದ ಎಲ್ಲಾ ವಿದ್ಯುತ್ ಕಂಬಗಳ ಟಿಸಿ ಗಳಿಗೆ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಬಿಡಾಡಿ ದನಗಳನ್ನು ತಕ್ಷಣವೇ ಸ್ಥಳಾಂತರಿಸಬೇಕು ಎಂದು ಜಿಲ್ಲಾಧಿಕಾರಿಗಳ ಮುಖಾಂತರ ಆಗ್ರಹಿಸಿದರು. ಬೇಡಿಕೆಗಳನ್ನು ಈಡೇರಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸಂಘಟನೆಯ ಗೌರವಾಧ್ಯಕ್ಷ ಪಿ.ಎಸ್. ಕಾಳೆ, ಆಟೋ ಸೇನಾ ಅಧ್ಯಕ್ಷ ಈರಪ್ಪ ಹೆಬಸೂರ, ಸತೀಶ ಕುಂಬಾರ, ಸುನೀಲ ಮುಳ್ಳಾಳ, ಸದಾನಂದಸಿಂಗ್ ಗುರ್ಲಹೊಸುರ, ರಾಮುಗೌಡರ್, ಗೋವಿಂದ ಹುಣಶೀಮರದ, ಸಂತೋಷ ಹೊಸಳ್ಳಿ, ಮರಿಯಪ್ಪ ಹುಣಶೀಮರದ, ಅಭಿಷೇಕ ಕುರ್ತಕೋಟಿ, ಈರಣ್ಣ ತಳವಾರ, ಪ್ರಮೋದ ಸಿಂಗ್, ಸಂಗಮೇಶ ಅಂಗಡಿ, ರವಿ ಜಲಗಾರ, ಮುತ್ತು ಪೂಜಾರ, ಮಂಜುನಾಥ ಬನ್ನಹಟ್ಟಿ ಸೇರಿದಂತೆ ಹಲವರು ಹಾಗೂ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka